ವಿಜಯಪುರ | ಸಂಪುಟ 04 | ಸಂಚಿಕೆ 138 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಬುಧವಾರ, ಜುಲೈ, 22, 2026



"ಶರಣರ ವಚನ ಸಾಹಿತ್ಯವನ್ನು ಉಳಿಸಿ ಮುಂದಿನ ಪೀಳಿಗೆಗೆ ನೀಡಿದವರು ವಚನ ಪಿತಾಮಹ ಡಾ. ಪ.ಗು. ಹಳಕಟ್ಟಿ ಅವರು ನಿತ್ಯ ಸ್ಮರಣಾರ್ಹರು. ವಿದ್ಯಾರ್ಥಿಗಳು ಬಸವಾದಿ ಶರಣರ ವಚನಗಳನ್ನು ಅಧ್ಯಯನ ಮಾಡಿ ಸಂಸ್ಕಾರಯುತ ಜೀವನ ನಡೆಸಬೇಕು."

■ ಸಂಗಮೇಶ ಬಬಲೇಶ್ವರ

ನಿಕಟ ಪೂರ್ವ ಅಧ್ಯಕ್ಷರು ಕರ್ನಾಟಕ ಬಾಲ ವಿಕಾಸ ಅಕಾಡೆಮಿ

# 1ರಿಂದ 5 ವರೆಗೆ ಶಿಕ್ಷಣ ಕಡ್ಡಾಯವಾಗಿ ಮಾತೃಭಾಷೆಯಲ್ಲಿರಲಿ

## ಸಿಂದಗಿಯಲ್ಲಿ 21ನೇ ಕನ್ನಡ ಸಾಹಿತ್ಯ ಜಿಲ್ಲಾ ಸಮ್ಮೇಳನಕ್ಕೆ ಅದ್ದೂರಿ ಚಾಲನೆ | ಸರ್ವಾಧ್ಯಕ್ಷರ ಮೆರವಣಿಗೆ | ಶಾಸಕ ಅಶೋಕ ಮನಗೂಳಿ ಉದ್ಘಾಟನೆ | ಸರ್ವಾಧ್ಯಕ್ಷ ಹ.ಮ.ಪೂಜಾರ ಅಭಿಮತ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಯುವ ಪೀಳಿಗೆ ಸಾಹಿತ್ಯ ಕ್ಷೇತ್ರದಲ್ಲಿ ಮುಂದೆ ಬರಬೇಕು. ಇಡೀ ನಾಡಿಗೆ ಕೊಟ್ಟಂತ ಹಿರಿಯರ ಸಂದೇಶವನ್ನು ಈ ಸಾಹಿತ್ಯ ಸಮ್ಮೇಳನದ ಮೂಲಕ ಜನರಿಗೆ ತಲುಪಿಸಬೇಕು ಎನ್ನುವ ನಿಟ್ಟಿನಲ್ಲಿ ಸಾಹಿತ್ಯ ಸಮ್ಮೇಳನ ಹಮ್ಮಿಕೊಳ್ಳಲಾಗುತ್ತಿದೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ನಗರದ ಎಚ್.ಜಿ.ಪ ಪೂ ಕಾಲೇಜು ಆವರಣದಲ್ಲಿ ಜಿಲ್ಲಾ ಸಾಹಿತ್ಯ ಪರಿಷತ್ತು ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಸಹಯೋಗದಲ್ಲಿ ಆಧುನಿಕ ಭಗಿರಥ ದಿ. ಎಂ.ಸಿ.ಮನಗೂಳಿ ವೇದಿಕೆಯಲ್ಲಿ ಹಮ್ಮಿಕೊಂಡ ಜಿಲ್ಲಾ 21ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡ ನಾಡು-ನುಡಿ, ನೆಲ, ಜಲ, ಭಾಷೆ ಇವುಗಳನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಸಮ್ಮೇಳನಗಳು ಮಹತ್ವದ ಪಾತ್ರ ಹಾಗೂ ಸಾಹಿತ್ಯ ಪ್ರೇಮಿಗಳಿಗೆ ಪ್ರೇರಣೆ ನೀಡಬೇಕೆನ್ನುವ ಉದ್ದೇಶದಿಂದ ಸಾಹಿತ್ಯ ಸಮ್ಮೇಳನಗಳು ಹಮ್ಮಿಕೊಳ್ಳಲಾಗುತ್ತಿದೆ. ಕನ್ನಡ ಸಾಹಿತ್ಯ ಸಮ್ಮೇಳನ ನಮ್ಮೆಲ್ಲರ ಅಕ್ಷರಜಾತ್ರೆಯಾಗಿದೆ ಎಂದು ಹೇಳಿದರು.

ಕಸಾಪ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ, ತಾಲೂಕಾಧ್ಯಕ್ಷ ವೈ.ಸಿ.ಮಯೂರ ಮಾತನಾಡಿ, ಜಾತ್ಯಾತೀತ ಹಾಗೂ ಧರ್ಮಾತೀತವಾಗಿ ಎಲ್ಲರೂ ಅಭಿಮಾನದಿಂದ ಆಚರಿಸುವ ಹಬ್ಬವೆಂದರೆ ಅದು ಕನ್ನಡದ ಜಾತ್ರೆಯಾಗಿದೆ ಎಂದರು.

ಸಾನಿಧ್ಯ ವಹಿಸಿದ ನಗರದ ಗುರುದೇವಾಶ್ರಮದ ಶಾಂತಗಂಗಾಧರ ಸ್ವಾಮಿಗಳು, ಬುರಣಾಪುರ ಶ್ರೀಮತದ ಶ್ರೀಮಾತಾ ಯೋಗೇಶ್ವರಿ ಮಾತಾಜಿ, ಧರ್ಮಾಧಿಕಾರಿ ಡಾ.ಸಂದೀಪ ಪಾಟೀಲ, ಕಾನೂನು ಸಲಹೆಗಾರ ಅಶೋಕ ಗಾಯಕವಾಡ, ಗೌರವಾಧ್ಯಕ್ಷ ಮಹಾಂತೇಶ ಪಟ್ಟಣಶೆಟ್ಟಿ, ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಸಂತೋಷ ಸಾಲಿ, ಅಶೋಕ ಕೊಳಾರಿ, ಯೋಜನಾ ಪ್ರಾಧಿಕಾರದ ಅಧ್ಯಕ್ಷ ಹಣಮಂತ ಸುಣಗಾರ, ಡಾ.ಮಾದವ ಗುಡಿ, ಶಿಲ್ಪಾ ಭಸ್ಮೆ, ಅಭಿಷೇಕ ಚಕ್ರವರ್ತಿ, ಸುನಂದಾ ಯಂಪೂರೆ, ಆನಂದ ಶಾಬಾದಿ ಸೇರಿದಂತೆ ಅನೇಕರು ವೇದಿಕೆ ಮೇಲಿದ್ದರು.



"ಶಿಕ್ಷಕ ವೃತ್ತಿಯ ಮೂಲಕ ತನ್ನ ಇಡೀ ಜೀವನವನ್ನೇ ಮಕ್ಕಳ ಬದುಕಿಗಾಗಿ ಮುಡುಪಾಗಿಟ್ಟ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ, ಜಿಲ್ಲೆಯ ಹಿರಿಯ ಮಕ್ಕಳ ಸಾಹಿತಿ ಹ. ಮ.ಪೂಜಾರ ಅವರನ್ನು ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಿದ ಸಾಹಿತ್ಯ ಪರಿಷತ್ತಿನ ಎಲ್ಲ ಪದಾಧಿಕಾರಿಗಳಿಗೆ ಅಭಿನಂದನೆಗಳು ಸಲ್ಲಿಸುವೆ."

■ ಅಶೋಕ ಮನಗೂಳಿ

ಶಾಸಕರು, ಸಿಂದಗಿ ಮತಕ್ಷೇತ್ರ



### ಸರ್ವಾಧ್ಯಕ್ಷರ ಅದ್ದೂರಿ ಮೆರವಣಿಗೆ

ಕಾರ್ಯಕ್ರಮಕ್ಕೂ ಮುನ್ನ ಸಿಂದಗಿ ಪಟ್ಟಣದ ಡಾ. ಅಂಬೇಡ್ಕರ ವೃತ್ತದಿಂದ ಸಕಲ ವಾದ್ಯ ಮೇಳಗಳ ಮೂಲಕ ಟಿಪ್ಪು ಸುಲ್ತಾನ ವೃತ್ತ, ಜಗದ್ಗುರು ತೋಂಟದ ಸಿದ್ದಲಿಂಗ ಶ್ರೀಗಳ ರಸ್ತೆಯ ಮಾರ್ಗವಾಗಿ, ಸ್ವಾಮಿ ವಿವೇಕಾನಂದ ವೃತ್ತದಿಂದ ವೇದಿಕೆಯವರೆಗೆ ಸರ್ವಾದ್ಯಕ್ಷ ಹ.ಮ.ಪೂಜಾರ ಅವರ ಮೆರವಣಿಗೆ ಅದ್ದೂರಿಯಾಗಿ ಜರುಗಿತು.

### ಅಡ್ಡದಾರಿಯಿಂದ ಪ್ರಶಸ್ತಿ ಪಡೆದವರಿಗೆ ಆತ್ಮತೃಪ್ತಿ ಇರೊಲ್ಲ



ಸಿಂದಗಿ: ಅಡ್ಡದಾರಿ ಹಿಡಿದು ಪ್ರಶಸ್ತಿ ಪಡೆದವರಿಗೆ ಆತ್ಮತೃಪ್ತಿ ಇರುವುದಿಲ್ಲ. ಸಾಹಿತ್ಯ ಕೃಷಿಯನ್ನು ಗುರುತಿಸಿ ನೀಡುವ ಪ್ರಶಸ್ತಿಗೆ ಮನ್ನಣೆ ದೊರೆಯುತ್ತದೆ. ಅದು ಸಮಾಜ ನೀಡುವ ಗೌರವ ಎಂದು ಸಮ್ಮೇಳನದ ಸರ್ವಾಧ್ಯಕ್ಷ ಮಕ್ಕಳ ಸಾಹಿತಿ ಹ.ಮ.ಪೂಜಾರ ಅಭಿಪ್ರಾಯ ವ್ಯಕ್ತಪಡಿಸಿದರು.

ಸಾಹಿತ್ಯ ಸಮ್ಮೇಳನ ಭಾವೈಕ್ಯತೆಯ ಪ್ರತೀಕವಾಗಿದೆ. ಸಿಂದಗಿಯಲ್ಲಿ ಕನ್ನಡ ಬಳಗವನ್ನು ಸ್ಥಾಪಿಸಿ ಕನ್ನಡದ ಕಂಪು ಚೆಲ್ಲಿದ ಪತ್ರಿಕಾ ರಂಗದ ಭೀಷ್ಮ ರೇ.ಚ.ರೆವಡಿಗಾರ, ಅನೇಕ ಕೃತಿಗಳನ್ನು ಬರೆದು ಸಾಹಿತ್ಯ ರಂಗವನ್ನು ಶ್ರೀಮಂತಗೊಳಿಸಿದ ಸುಶಿಲಾಬಾಯಿ ಕಮತಗಿ, ಪಿ.ಮುನಿಕುಮಾರ ಅವರ ಶ್ಲಾಘನೀಯ ಸಾಹಿತ್ಯ ಸೇವೆಯಿಂದ ಸಿಂದಗಿ ಸಾಹಿತ್ತಿಕ, ಸಾಂಸ್ಕೃತಿಕ ಕೇಂದ್ರವಾಗಿದೆ ಎಂದರು.

ಮೊದಲು ಕಥೆ, ಕವನಗಳು ಪಠ್ಯಕ್ರಮದಲ್ಲಿ ಇರುತ್ತಿತ್ತು. ಅದು ಇಂದು ಮಾಯವಾಗಿದೆ. ಒಳ್ಳೆಯ ಸಂದೇಶ ನೀಡುವ ಕವನಗಳು ಪಠ್ಯಕ್ರಮದಲ್ಲಿ ಅಳವಡಿಕೆ ಮಾಡುವುದರಿಂದ ಮಗುವಿನ ಅಭಿವ್ಯಕ್ತಿ ಸ್ವಾತಂತ್ರ್ಯ ಉಳಿಸಿದಂತಾಗುತ್ತದೆ. ಅದಕ್ಕಾಗಿ ಮಕ್ಕಳಿಗೆ 1ರಿಂದ 5 ನೇ ತರಗತಿವರೆಗೆ ಶಿಕ್ಷಣವು ಕಡ್ಡಾಯವಾಗಿ ಮಾತೃಭಾಷೆಯಲ್ಲಿರಬೇಕು ಎಂದು ಸರ್ವಾದ್ಯಕ್ಷ ಹ.ಮ.ಪೂಜಾರ ಒತ್ತಾಯಿಸಿದರು.

## ಆಲಮಟ್ಟಿ ಉದ್ಯಾನಗಳಿಗೆ ಶಾಲಾ ಮಕ್ಕಳಿಗೆ ಉಚಿತ ಪ್ರವೇಶಕ್ಕೆ ಮನವಿ

■ ಉದಯರಶ್ಮಿ ದಿನಪತ್ರಿಕೆ



ಆಲಮಟ್ಟಿ: ಆಲಮಟ್ಟಿಯ ವಿವಿಧ ಉದ್ಯಾನಗಳಿಗೆ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಉಚಿತ ಪ್ರವೇಶ ಕಲ್ಪಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಜ್ಯ ಘಟಕದ ಅಧ್ಯಕ್ಷ ಚಂದ್ರಶೇಖರ ನುಗ್ಗಲಿ ನೇತೃತ್ವದ ತಂಡ ಮಂಗಳವಾರ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಮನವಿ ಅರ್ಪಿಸಿತು.

ಮನವಿ ಸಲ್ಲಿಸಿ ಮಾತನಾಡಿದ ಚಂದ್ರಶೇಖರ ನುಗ್ಗಲಿ, "ಆಲಮಟ್ಟಿಯ ಉದ್ಯಾನ ವೀಕ್ಷಿಸಲು 6 ವರ್ಷ ಮೇಲ್ಪಟ್ಟ ಎಲ್ಲರಿಗೂ ಪೂರ್ತಿ ದರ ವಿಧಿಸಲಾಗುತ್ತಿದೆ. ಪ್ರವೇಶಕ್ಕೆ ಪ್ರತಿಯೊಬ್ಬರೂ 250 ರೂ. ಪಾವತಿಸಬೇಕಾಗುತ್ತದೆ.

ರಾಜ್ಯದ ಮೂಲೆ-ಮೂಲೆಗಳಿಂದ ಶಾಲಾ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಉದ್ಯಾನಕ್ಕೆ ಬರುತ್ತಾರೆ. ಆದ್ದರಿಂದ ಸರ್ಕಾರಿ ಪ್ರಾಥಮಿಕ ಶಾಲೆಯ ಎಲ್.ಕೆ.ಜಿಯಿಂದ 8ನೇ ತರಗತಿವರೆಗಿನ ಮಕ್ಕಳಿಗೆ ಉಚಿತ ಪ್ರವೇಶಕ್ಕೆ ಅವಕಾಶ ಕಲ್ಪಿಸಬೇಕು" ಎಂದು ಒತ್ತಾಯಿಸಿದರು.

ಯಾತ್ರಿ ನಿವಾಸ ನಿರ್ಮಾಣ ಸೇರಿದಂತೆ ವಿವಿಧ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆಯೂ ಅವರು ಮನವಿಯಲ್ಲಿ ಕೋರಿದರು.

ಈ ಸಂದರ್ಭದಲ್ಲಿ ಶಿಕ್ಷಕರ ಸಂಘದ ನಿಡಗುಂದಿ ತಾಲ್ಲೂಕು ಘಟಕದ ಅಧ್ಯಕ್ಷ ಸಲೀಂ ದಡೆದ, ಎಂ.ಎಸ್. ಯಳಮೇಲಿ, ಮುತ್ತು ಹೆಬ್ಬಾಳ, ವಿ.ಕೆ. ಮಸೂತಿ, ಪ್ರಭಾಕರ ಹೆಬ್ಬಾಳ, ಕೆ.ಬಿ. ಹಣಗಿ, ವೀರಭದ್ರಯ್ಯ ಮಠ, ಆರ್.ಜಿ. ಪತ್ತಾರ ಸೇರಿದಂತೆ ಹಲವರು ಇದ್ದರು.

ಮನವಿ ಸ್ವೀಕರಿಸಿದ ಸಚಿವ ರಾಮಲಿಂಗಾರೆಡ್ಡಿ ಅವರು, "ಈ ಕುರಿತು ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಕೆಬಿಜೆಎನ್ಎಲ್ ಎಂಡಿ ಅವರಿಗೆ ಸೂಚಿಸುತ್ತೇನೆ" ಎಂದು ಭರವಸೆ ನೀಡಿದರು.

## ನಿಯಮಿತ ಆರೋಗ್ಯ ತಪಾಸಣೆಯಿಂದ ಅಪಾಯ ದೂರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಿಯಮಿತ ಆರೋಗ್ಯ ತಪಾಸಣೆಗಳು ಗಂಭೀರವಾಗಿ ಅನಾರೋಗ್ಯಕ್ಕೆ ಒಳಗಾಗುವ ಅಪಾಯವನ್ನು ಕಡಿಮೆ ಮಾಡುತ್ತದೆ. ಇದರಿಂದ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಸುಲಭವಾಗುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶ್ರೀಮತಿ ದೀಪಾಕ್ಷಿ ಜಾನಕಿ ಹೇಳಿದರು.

ನಗರದ ಕೀರ್ತಿ ನಗರದಲ್ಲಿರುವ ಶ್ರೀ ಶರಣಜ್ಯೋತಿ ವಿದ್ಯಾ ಸಂಸ್ಥೆಯ ಗ್ರಾಮೀಣ ಬಾಲಕಿಯರ ವಸತಿನಿಲಯ (ಹಾಸ್ಟೆಲ್) ದಲ್ಲಿರುವ ಬಾಲಕಿಯರಿಗಾಗಿ ಜುಲೈ 20 ಸೋಮವಾರ ಏರ್ಪಡಿಸಿದ ಉಚಿತ ಆರೋಗ್ಯ ತಪಾಸಣೆ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಈ ಸಂಸ್ಥೆಯ ಅಧಿಕಾರಿಗಳು ನಮ್ಮ ಇಲಾಖೆಯ ಅನುದಾನದ ಸಹಾಯ ಪಡೆದು ಇಲ್ಲಿಯ ಬಾಲಕಿಂ-ಯರ ಆರೋಗ್ಯದ ಹಿತದೃಷ್ಟಿಯಿಂದ ಇಂತಹ ಉಪಯುಕ್ತ ಕಾರ್ಯಕ್ರಮ ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದರು.

ಶರಣಜ್ಯೋತಿ ವಿದ್ಯಾ ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ದೇವನಗಾಂವ ಮಾತನಾಡಿ, ಮಕ್ಕಳ ಆರೋಗ್ಯ ತಪಾಸಣೆ ಮಾಡುವುದರಿಂದ ಇಲ್ಲಿಯ ಹೆಣ್ಣುಮಕ್ಕಳ ಆರೋಗ್ಯದಲ್ಲಾಗುವ ಬದಲಾವಣೆಗಳ ಕುರಿತು ಅರಿಯಲು ಸಾಧ್ಯವಾಗುತ್ತದೆ. ಗ್ರಾಮೀಣ ಮಕ್ಕಳಿಗೆ ಅನುಕೂಲವಾಗುತ್ತದೆ.

ಹೀಗಾಗಿ ಸಂಸ್ಥೆಯಲ್ಲಿ ನಿಯಮಿತವಾಗಿ ಆರೋಗ್ಯ ತಪಾಸಣೆ ಶಿಬಿರ ಹಮ್ಮಿಕೊಳ್ಳಲು ಇಲಾಖೆಯ ಅಧಿಕಾರಿಗಳು ಹಿಂದಿನಂತೆ ಮುಂದೆಯೂ ಸಹಕರಿಸಲು ಮನವಿ ಮಾಡಿಕೊಂಡರು.

ಆರೋಗ್ಯ ಅಧಿಕಾರಿ ಡಾ. ಪಿ.ಎಸ್.ಪಾಟೀಲ ಮಾತನಾಡಿ, ಬಾಲಕಿಯರಿಗೆ ಪೌಷ್ಟಿಕ ಆಹಾರ ಸೇವನೆಯಿಂದಾಗುವ ಪ್ರಯೋಜನಗಳ ಕುರಿತು ವಿವರಿಸಿದರಲ್ಲದೆ ಕರಿದ ಮತ್ತು ಪ್ಯಾಕೆಟ್ ಆಹಾರ ಪದಾರ್ಥಗಳಿಂದ ದೂರವಿರಲು ಸಲಹೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧೀಕ್ಷಕಿ ಶ್ರೀಮತಿ ಅನಿತಾ ಪಾಟೀಲ ಆರೋಗ್ಯದ ವಿಷಯದಲ್ಲಿ ಬಾಲಕಿಯರು ವಹಿಸಬೇಕಾದ ಮುಂಜಾಗ್ರತೆ ಕುರಿತು ಕಿವಿಮಾತು ಹೇಳಿದರು.

ವಸತಿ ನಿಲಯದ ಅಧೀಕ್ಷಕಿ ವಿಜಯಲಕ್ಷ್ಮಿ ಎಂ ದೇವನಗಾಂವ ಅವರು, ಬಾಲಕಿಯರು ಆರೋಗ್ಯದ ಕಾಳಜಿಯೊಂದಿಗೆ ಉತ್ತಮ ಸಂಸ್ಕಾರ ಮತ್ತು ಶಿಸ್ತು ರೂಢಿಸಿಕೊಳ್ಳುವಂತೆ ತಿಳಿ ಹೇಳಿದರು.

ಶಿಬಿರದಲ್ಲಿ ವೈದ್ಯಕೀಯ ಸಿಬ್ಬಂದಿಗಳಾದ ಡಾ. ಪಿ.ಎಸ್.ಪಾಟೀಲ (ಆರೋಗ್ಯಾಧಿಕಾರಿ), ವಾಣಿಶ್ರೀ ಹಿರೇಮಠ (ಎಲ್ಹಿಬಿ), ರಾಧಾ ಪಾಟೀಲ (ಪಿಎಚ್ಸಿಒ), ಸನಾ ಆಳಂದ (ಎಚ್ಐಒ), ರೂಪಾ ಬಿದರಿ (ಆಶಾ ಕಾರ್ಯಕರ್ತೆ) ಪಾಲ್ಗೊಂಡಿದ್ದರು.

ಶಿಬಿರದಲ್ಲಿ ವಸತಿ ನಿಲಯದ ಒಟ್ಟು 58 ಬಾಲಕಿಂ-ಯರು ಹಾಗೂ ಸಿಬ್ಬಂದಿಗೆ ಆರೋಗ್ಯ ತಪಾಸಣೆ ಮಾಡಲಾಯಿತು.



## ಶರಣ ಸಾಹಿತ್ಯ ಎಂದು ಅಳಿಯದ ಅಮೂಲ್ಯ ಸಂಪತ್ತು



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಶರಣ ಸಾಹಿತ್ಯ ಎಂದು ಅಳಿಯದ ಅಮೂಲ್ಯ ಸಂಪತ್ತು ಅದನ್ನು ಉಳಿಸಲು ಶ್ರಮಿಸಿದವರು, ತಮ್ಮ ಮನೆಯನ್ನು ಮಾರಿ ಪ್ರಿಂಟಿಂಗ್ ಪ್ರೆಸ್ಸನ್ನು ತೆರೆದು, ಊರೂರು ಹಾಗೂ ಮಠಮಾನ್ಯಗಳನ್ನು ಅಲೆದು ತಾಳೆಗರಿಗಳನ್ನು ಹುಡುಕಿಕೊಂಡು ಬಂದು ಶರಣರ ವಚನ ಸಾಹಿತ್ಯವನ್ನು ಉಳಿಸಿ ಮುಂದಿನ ಪೀಳಿಗೆಗೆ ನೀಡಿದವರು ವಚನ ಪಿತಾಮಹ ಡಾ. ಪ ಗು ಹಳಟ್ಟಿಯವರು, ಅವರು ನಿತ್ಯ ಸ್ಮರಣಾರ್ಹರು. ವಿದ್ಯಾರ್ಥಿಗಳು ಬಸವಾದಿ ಶರಣರ ವಚನಗಳನ್ನು ಅಧ್ಯಯನ ಮಾಡಿ ಸಂಸ್ಕಾರಯುತ ಜೀವನವನ್ನು ನಡೆಸಬೇಕು ಎಂದು ಕರ್ನಾಟಕ ರಾಜ್ಯ ಬಾಲ ವಿಕಾಸ ಅಕಾಡೆಮಿಯ ನಿಕಟ ಪೂರ್ವ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಹೇಳಿದರು.

ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಆಶ್ರಯದಲ್ಲಿ ಮಮದಾಪುರದ ಸರಕಾರಿ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ನಡೆದ ದಿ. ಶ್ರೀ ಬಾಳಾಸಾಹೇಬಗೌಡ ಪಾಟೀಲ್ ರವರ ಸ್ಮರಣೆಗಾಗಿ ಏರ್ಪಡಿಸಿದ್ದ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಿಸಿ ಅವರು ಮಾತನಾಡಿದರು.

ಸಮಾರಂಭದ ದಿವ್ಯ ಸಾನಿಧ್ಯವನ್ನು ವಹಿಸಿದ್ದ ಮಮದಾಪುರ ವಿರಕ್ತಮಠದ ಪೀಠಾಧ್ಯಕ್ಷ ಅಭಿನವ ಮುರುಘೇಂದ್ರ ಮಹಾಸ್ವಾಮಿಗಳು ಮಾತನಾಡಿ, ಶರಣ ಸಾಹಿತ್ಯ ಪರಿಷತ್ತು ದತ್ತಿ ಉಪನ್ಯಾಸಗಳನ್ನು ಏರ್ಪಡಿಸುವುದರ ಮೂಲಕ ವಿದ್ಯಾರ್ಥಿಗಳಿಗೆ ಸಮಾಜಕ್ಕೆ ಶರಣರ ಚಿಂತನೆಗಳನ್ನು ತಲುಪಿಸುತ್ತಿರುವುದು ಅತ್ಯಂತ ಸಂತೋಷದ ಸಂಗತಿ ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಉಪಾಧ್ಯಕ್ಷ ಮುತ್ತೇಶ್ ಗಡ್ಡರಮಠ ವಹಿಸಿದ್ದರು.

ವಿಶ್ರಾಂತ ಮುಖ್ಯೋಪಾಧ್ಯಾಯ ಬಸವರಾಜ ಗೋಟ್ಯಾಳ ಅವರು ವಚನ ಪಿತಾಮಹ ಪ. ಗು ಹಳಕಟ್ಟಿಯವರ ಬದುಕು ಬರಹದ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು.

ಬಬಲೇಶ್ವರ ತಾಲೂಕಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಎಲ್ ಪಿ ಬಿರಾದಾರ್, ಬಿ.ಸಿ ಸಾರವಾಡ, ಭೀಮರಾಯ ಅಮಜಗೋಳ, ಮಲ್ಲಪ್ಪ ತೊದಲಬಾಗಿ. ಪ್ರಾಚಾರ್ಯರಾದ ಶ್ರೀಮತಿ ಪಾರ್ವತಿ, ಉಪಪ್ರಾಚಾರ್ಯರಾದ ರಾಘವೇಂದ್ರ ಪುರೋಹಿತ, ಶರಣ ಕರಿಕಲ್ಲ, ರಫೀಕ್ ಭಗವಾನ್, ಮಾರುತಿ ಮಾದರ್ ಸೇರಿದಂತೆ ಅನೇಕ ಗಣ್ಯರು ವಿದ್ಯಾರ್ಥಿಗಳು ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

## ಎಸ್.ಎಂ.ಪಾಟೀಲ ಗಣಿಹಾರ ಬಹಿರಂಗ ಕ್ಷಮೆಯಾಚಿಸಲಿ

### ವಿಜಯಪುರ ಮಹಾನಗರ ಪಾಲಿಕೆ ಮಾಜಿ ಸದಸ್ಯ ರವೀಂದ್ರ ಲೋಣಿ ಒತ್ತಾಯ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ ಜನರ ತೆರಿಗೆ ಹಣದಿಂದ ನಿರ್ಮಾಣವಾಗಿದೆ ಎಂದು ತಪ್ಪು ಮಾಹಿತಿ ನೀಡಿ ಜನರ ದಿಕ್ಕು ತಪ್ಪಿಸುತ್ತಿರುವ ಕಾಂಗ್ರೆಸ್ ವಕ್ತಾರ ಎಸ್.ಎಂ. ಪಾಟೀಲ ಗಣಿಹಾರ ಕೂಡಲೇ ದೇಶದ ಜನತೆಗೆ ಕ್ಷಮೆಯಾಚಿಸಬೇಕು ಎಂದು

ಪಾಲಿಕೆ ಮಾಜಿ ಸದಸ್ಯ ಹಾಗೂ ಬಿಜೆಪಿ ಮುಖಂಡ ರವೀಂದ್ರ ಲೋಣಿ ಒತ್ತಾಯಿಸಿದರು.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,

ಅಯೋಧ್ಯೆಯ ರಾಮ ಮಂದಿರ ನಿರ್ಮಾಣಕ್ಕೆ ಸರ್ಕಾರ ಕೇವಲ ಒಂದು ರೂ. ಮಾತ್ರ ಟ್ರಸ್ಟ್ ನೀಡಿದೆ, ಯಾವ ಅನುದಾನವನ್ನು ಸರ್ಕಾರದಿಂದ ಮಂದಿರ ನಿರ್ಮಾಣಕ್ಕೆ ಬಿಡುಗಡೆಯಾಗಿಲ್ಲ, ಆದರೆ ಜನರ ತೆರಿಗೆ ದುಡ್ಡು ಬಳಕೆ ಮಾಡಿ ಮಂದಿರ ನಿರ್ಮಾಣ ಮಾಡಿದ್ದಾರೆ ಎಂದು ತಪ್ಪು ಗ್ರಹಿಕೆ ಮಾಡುವ ಪ್ರಯತ್ನ ಮಾಡಿರುವ ಎಸ್.ಎಂ. ಪಾಟೀಲ ಗಣಿಹಾರ ಕೂಡಲೇ ಬಹಿರಂಗವಾಗಿ ಕ್ಷಮೆಯಾಚಿಸಬೇಕು ಎಂದರು.

ನಿಜವಾಗಿಯೂ ನಿಮಗೆ ಕಾಳಜಿ ಇದ್ದರೆ ಅಲ್ಪಸಂಖ್ಯಾತ ಬಗ್ಗೆ ಕಾಳಜಿ ಇದ್ದರೆ ವಕ್ಫ್ ಆಸ್ತಿ ಅತಿಕ್ರಮಣ ಬಗ್ಗೆ ಮಾತನಾಡಿ, ಅದರ ಬಗ್ಗೆ ಹೋರಾಡಿ, ಅನ್ವರ ಮಾನಿಪ್ಪಡಿ ವರದಿ ಆಧರಿಸಿ ಹೋರಾಟ ಮಾಡಿ ಅಲ್ಪಸಂಖ್ಯಾತರಿಗೆ ನ್ಯಾಯ ಒದಗಿಸಿ, ಇದನ್ನು ಬಿಟ್ಟು ರಾಮ ಮಂದಿರ ವಿಷಯ ಕೆಣಕುವುದು ಎಷ್ಟು ಸರಿ? ಎಂದು ಪ್ರಶ್ನಿಸಿದರು.

ವಿಧಾನ ಪರಿಷತ್ ಸ್ಥಾನ ಗಿಟ್ಟಿಸಿಕೊಳ್ಳಲು ಈ ರೀತಿ ಸುಳ್ಳು ಹೇಳಿಕೆ ನೀಡಿ ಕಾಂಗ್ರೆಸ್ ಹೈಕಮಾಂಡ್ ಮೆಚ್ಚಿಸಲು ಹೋಗಬೇಡಿ ಎಂದರು.

ನಿಮ್ಮ ರಾಜ್ಯ ಸರ್ಕಾರದ ಐಟಿ ಬಿಟಿ ಮಂತ್ರಿಗಳು ಏನು ಮಾಡುತ್ತಿದ್ದಾರೆ, ಕೇಂದ್ರ ಸರ್ಕಾರದ ಐಟಿ ಬಿಟಿ ಮಂತ್ರಿ ಯಾವ ರೀತಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂಬುದನ್ನು ನೋಡಿ ಕಲಿತುಕೊಳ್ಳಲು ರಾಜ್ಯ

ನೀವು ಕಾಂಗ್ರೆಸ್ ಪಕ್ಷದ ಕಾರ್ಯಾಲಯದಲ್ಲಿ ಏಕೆ ಪತ್ರಿಕಾಗೋಷ್ಠಿ ಮಾಡುವುದಿಲ್ಲ? ಖಾಸಗಿ ಹೋಟೆಲ್ ನಲ್ಲಿ ಏಕೆ ಪತ್ರಿಕಾಗೋಷ್ಠಿ ಮಾಡುತ್ತೀರಿ ಎಂದು ಪ್ರಶ್ನಿಸಿದರು.

ಸಾಧು-ಸಂತರ ಮೇಲೆ ಇಲ್ಲ ಸಲ್ಲದ ಆರೋಪಗಳನ್ನು ಹೊರೆಸುವ ಮೂಲಕ ಅವಮಾನ ಮಾಡುವ ಕೆಲಸವನ್ನು ಕಾಂಗ್ರೆಸ್ ಮುಖಂಡ ಎಸ್.ಎಂ. ಪಾಟೀಲ ಗಣಿಹಾರ ಮಾಡುತ್ತಿದ್ದಾರೆ, ಅವರ ಆರೋಪದಲ್ಲಿ ಯಾವ ಹುರುಳಿಲ್ಲ ಎಂದರು.

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತ ವಿಶ್ವಗುರು ಆಗುವ ನಿಟ್ಟಿನಲ್ಲಿ ಮುನ್ನಡೆಯುತ್ತಿದೆ ಎಂದರು.

ಈ ಹಿಂದೆ ಜನಪರ ಕಾಳಜಿಯುಳ್ಳ ವ್ಯಕ್ತಿಯಾಗಿದ್ದ ಎಸ್.ಎಂ. ಪಾಟೀಲ ಗಣಿಹಾರ ಈಗ ಕೇವಲ ಕೇಂದ್ರ ಸರ್ಕಾರದ ಮೇಲೆ ವಾಗ್ದಾಳಿ ನಡೆಸುವುದನ್ನೇ ತಮ್ಮ ಕಾಯಕ ಮಾಡಿಕೊಂಡಿದ್ದಾರೆ ಎಂದರು.

ಸಹಕಾರಿ ಧುರೀಣ ಹಾಗೂ ಬಿಜೆಪಿ ಮುಖಂಡ ರಮೇಶ ಬಿದನೂರ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.



### ಬಹಿರಂಗ ಚರ್ಚೆಗೆ ಬನ್ನಿ

ಕೇಂದ್ರ ಸರ್ಕಾರದಿಂದ ವೈಫಲ್ಯವಾಗಿದ್ದರೆ ನೀವು ಚರ್ಚೆಗೆ ಬನ್ನಿ. ನಾನು ದಾಖಲೆ ಹಾಗೂ ಅಂಕಿ ಅಂಶಗಳ ಸಮೇತ ನಾನು ಕೇಂದ್ರ ಸರ್ಕಾರದ ಸಾಧನೆ ಪರ ಮಾತನಾಡುವೆ, ಬೇಕಾದರೆ ಸವಾಲು ಸ್ವೀಕರಿಸಿ ಎಂದು ಲೋಣಿ ಸವಾಲು ಹಾಕಿದರು.

ನಿಮ್ಮ ಪಕ್ಷದಲ್ಲಿ ಶಿಸ್ತು ಇಲ್ಲ, ನೀವು ಮುಖಂಡರ ಜೊತೆ ಚರ್ಚಿಸುವುದಿಲ್ಲ, ನೀವು ತಪ್ಪು ಮಾಹಿತಿ ಬಿತ್ತರಿಸಿದರೆ ಕಾಂಗ್ರೆಸ್ ಪಕ್ಷಕ್ಕೂ ಮುಜುಗರ, ಹೀಗಾಗಿ ಕಾಂಗ್ರೆಸ್ ನಾಯಕರು ಎಸ್.ಎಂ. ಪಾಟೀಲರಿಗೆ ಬ್ರೇಕ್ ಹಾಕುವ ಕೆಲಸ ಮಾಡಲಿ ಎಂದರು.

# ಗೋಲಗೇರಿ ಗೊಲ್ಲಾಳೇಶ್ವರ ಪುರಾಣ ಪ್ರಾರಂಭ

■ ಉದಯರಶ್ಮಿ ದಿನಪತ್ರಿಕೆ




■ ಯಡ್ರಾಮಿ ವಿರಕ್ತಮಠದ ಲಿಂ. ಸಿದ್ಧರಾಮ ಮಹಾಸ್ವಾಮಿಗಳ 5ನೇ ಪುಣ್ಯಾರಾಧನೆ ನಿಮಿತ್ತ ಶ್ರೀ ಸಿದ್ಧಲಿಂಗ ಸ್ವಾಮಿಗಳ ನೇತೃತ್ವದಲ್ಲಿ 11ದಿನಗಳ ಕಾಲ ವಿವಿಧ ಧಾರ್ಮಿಕ ಕಾರ್ಯಕ್ರಮಗಳು

ಯಡ್ರಾಮಿ: ಪಟ್ಟಣದ ಶ್ರೀ ಮುರಘೇಂದ್ರ ಶಿವಯೋಗಿ ವಿರಕ್ತ ಮಠದ ಲಿಂ. ಪೂಜ್ಯ ಶ್ರೀ ಸಿದ್ದರಾಮ ಮಹಾಸ್ವಾಮಿಗಳ ಐದನೇ ವರ್ಷದ ಪುಣ್ಯಾರಾಧನೆ ನಿಮಿತ್ಯವಾಗಿ ಶ್ರೀ ಮಠದ ಪ್ರಸ್ತುತ ಪೀಠಾಧಿಪತಿಗಳಾದ ಪರಮ ಪೂಜ್ಯ ಸಿದ್ಧಲಿಂಗ ಸ್ವಾಮೀಜಿಗಳ ನೇತೃತ್ವದಲ್ಲಿ ಇಂದು ಮಂಗಳವಾರ ಪುರಾಣ ಕಾರ್ಯಕ್ರಮ ಪ್ರಾರಂಭವಾಗುವುದು.


ಜು.21ರಿಂದ ಆ.1ರವರೆಗೆ 11ದಿನಗಳ ಪರ್ಯಂತರ ಶರಣ ಶ್ರೀ ಗೋಲಗೇರಿ ಗೊಲ್ಲಾಳೇಶ್ವರರ ಪುರಾಣವನ್ನು ಸಿದ್ಧಾಪುರ ಹಿರೇಮಠದ ವೇ.ಮೂ. ಶಿವಲಿಂಗಯ್ಯ ಶಾಸ್ತ್ರಿಗಳು ನಡೆಸಿಕೊಡುವರು. ವೇ. ಮೂ. ಶಿವಲಿಂಗಯ್ಯಸ್ವಾಮೀಜಿ ಹಾಗೂ ವೇ. ಮೂ.ಸಿದ್ದಲಿಂಗೇಶ್ವರ ಅವರಿಂದ ಸಂಗೀತ ಕಾರ್ಯಕ್ರಮ ನಡೆಯಲಿದೆ. ಮಂಗಳವಾರ ಸಾಯಂಕಾಲ ಪುರಾಣ ಕಾರ್ಯಕ್ರಮದಲ್ಲಿ ಮಾಗಣಗೇರಿ ಬ್ರಹನ್ಮಠದ ಪೂಜ್ಯ ಡಾ. ವಿಶ್ವಾರಾಧ್ಯ ಶಿವಾಚಾರ್ಯರು ಸಾನಿಧ್ಯ ವಹಿಸುವರು. ಸೊನ್ನ ವಿರಕ್ತ ಮಠದ ಪೂಜ್ಯ ಡಾ. ಶಿವಾನಂದ ಮಹಾಸ್ವಾಮಿಗಳು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. 11ದಿನಗಳಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗುವವು. ನಾಡಿನ ವಿವಿಧ ಹರ, ಗುರು, ಚರ ಮೂರ್ತಿಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರು ಭಾಗವಹಿಸಲಿದ್ದಾರೆ. ಪುಣ್ಯಾರಾಧನೆ ನಿಮಿತ್ತ ಆರೋಗ್ಯ ತಪಾಸಣೆ ಶಿಬಿರವೂ ಹಮ್ಮಿಕೊಳ್ಳಲಾಗಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಶ್ರೀ ಮಠದ ಭಕ್ತಾದಿಗಳು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಶ್ರೀಮಠದ ಪುರಾಣ ಸಮಿತಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ಈ ಸಂದರ್ಭದಲ್ಲಿ ಮುಖಂಡರಾದ ಎನ್. ಆರ್.ಪಾಟೀಲ, ಸಿದ್ಧನಗೌಡ ಮಾಲೀಪಾಟೀಲ, ಮಹಾಲಿಂಗಪ್ಪಗೌಡ ಬಂಡೆಪ್ಪಗೋಳ, ಗುರುಬಸಪ್ಪ ಸಾಹು ಸಣ್ಣಳ್ಳಿ, ಪ್ರಕಾಶ ಸಾಹು ಬೆಲ್ಲದ, ಚನ್ನವೀರಪ್ಪಗೌಡ ಬಂಡೆಪ್ಪಗೋಳ, ರಾಜಶೇಖರ ಸಾಹು ಡಗ್ಗಾ, ನಿಂಗನಗೌಡ ಜವಳಗಿ, ಲಕ್ಷ್ಮೀಕಾಂತ ಸೋನಾರ, ಶ್ರೀಶೈಲ ಸಾಹು ತಾಳಿಕೋಟಿ, ಬಸಯ್ಯಸ್ವಾಮಿ ಹೊಸಮಠ, ಅಪ್ಪುಗೌಡ ಮಾಲಿಪಾಟೀಲ, ಬಿ .ಬಿ. ವಾರದ, ಮಲ್ಹಾರರಾವ ಕುಲಕರ್ಣಿ, ಬಸವರಾಜ ಹೂಗಾರ, ಆನಂದ ಯತ್ನಾಳ, ರಾಜುಗೌಡ ಪಾಟೀಲ, ಚನ್ನವೀರ ಸಾಹು ತಾಳಿಕೋಟಿ, ಸಂಜೀವರಾವ ಕುಲಕರ್ಣಿ, ಅಣ್ಣಯ್ಯಸ್ವಾಮಿ ಹಿರೇಮಠ, ಬಸವರಾಜ ಉಪ್ಪಾರ, ನಾಗೇಂದ್ರ ಪಾಟೀಲ, ಸತೀಶ ಬಂಡೆಪ್ಪಗೋಳ, ಸಿದ್ದು ಹೂಗಾರ ಹಾಗೂ ಪಟ್ಟಣದ ಇತರರಿದ್ದರು.

## ಸಂಕಷ್ಟದಲ್ಲಿರುವ ರೈತರಿಗೆ ತಕ್ಷಣವೇ ಬೆಳೆ ಪರಿಹಾರ ವಿತರಿಸಲು ಬಿಜೆಪಿ ಮುಖಂಡರ ಒತ್ತಾಯ

# ಇಂಡಿ ತಾಲೂಕು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಲು ಆಗ್ರಹ

■ ಉದಯರಶ್ಮಿ ದಿನಪತ್ರಿಕೆ




ಇಂಡಿ: ತಾಲೂಕನ್ನು ತಕ್ಷಣವೇ ಬರಗಾಲ ಪೀಡಿತ ಪ್ರದೇಶ ಎಂದು ಘೋಷಿಸಬೇಕು ಮತ್ತು ರೈತರ ವಿವಿಧ ಜ್ವಲಂತ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಆಗ್ರಹಿಸಿ ಬಿಜೆಪಿ ಮುಖಂಡರು ಸೋಮವಾರ ಬಿಜೆಪಿ ಕಾರ್ಯಾಲಯದದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಸರ್ಕಾರದ ವಿರುದ್ಧ ಹರಿಹಾಯ್ದರು.

ಬಿಜೆಪಿ ಮಂಡಲ ಅಧ್ಯಕ್ಷ ಹಣಮಂತ್ರಾಯಗೌಡ ಪಾಟೀಲ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಎಸ್.ಎ. ಪಾಟೀಲ ಮಾತನಾಡಿ, ತಾಲೂಕಿನ ಅಭಿವೃದ್ಧಿಗೆ ವೇಗ ನೀಡದಿದ್ದರೆ ಮುಂಬರುವ ದಿನಗಳಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

ಇಂಡಿ ತಾಲೂಕಿನಲ್ಲಿ ತೀವ್ರ ಬರಗಾಲ ಆವರಿಸಿದ್ದು, ಸರ್ಕಾರ ತಕ್ಷಣವೇ ತಾಲೂಕನ್ನು ಬರಗಾಲ ಪೀಡಿತ ಪ್ರದೇಶ ಎಂದು ಘೋಷಿಸಬೇಕು. ಸಂಕಷ್ಟದಲ್ಲಿರುವ ರೈತರಿಗೆ ತಕ್ಷಣವೇ ಬೆಳೆ ಪರಿಹಾರ ವಿತ–ರಿಸಬೇಕು ಹಾಗೂ ತಾಲೂಕಿನ ಸಮಗ್ರ ಅಭಿವೃದ್ಧಿಗಾಗಿ ಸರ್ಕಾರ ವಿಶೇಷ ಪ್ಯಾಕೇಜ್ ಪ್ರಕಟಿಸಬೇಕು. ಇಂಡಿ ತಾಲೂಕು ನಿಂಬೆ ಬೆಳೆಗೆ ಜಗತ್ಪ್ರಸಿದ್ಧಿಯಾಗಿದೆ. ಆದರೆ ಇಲ್ಲಿನ ನಿಂಬೆ ಬೆಳೆಗಾರರು ಸೂಕ್ತ ಮಾರುಕಟ್ಟೆ ಮತ್ತು ಸೌಲಭ್ಯಗಳಿಲ್ಲದೆ ನಲುಗುತ್ತಿದ್ದಾರೆ. ನಿಂಬೆ ಅಭಿವೃದ್ಧಿ ನಿಗಮದಿಂದ ಬೆಳೆಗಾರರಿಗೆ ತಕ್ಷಣವೇ ಆರ್ಥಿಕ ಸಹಾಯ ನೀಡಬೇಕು. ನಿಂಬೆ ಹಣ್ಣುಗಳನ್ನು ಸಂರಕ್ಷಿಸಿಡಲು ಆಧು–ನಿಕ ವೇರ್‌ಹೌಸ್ (ಉಗ್ರಾಣ) ನಿರ್ಮಾಣ ಮಾಡಬೇಕು ಮತ್ತು ನಿಂಬೆ ಬೆಳೆಯ ವ್ಯಾಪಾರ ಕಡ್ಡಾಯವಾಗಿ ಎಪಿಎಂಸಿ ಮುಖಾಂತರವೇ ನಡೆಯುವಂತಾಗಬೇಕು ಎಂದು ಒತ್ತಾಯಿಸಿದರು.

ಮುಖಂಡರಾದ ಕಾಸೂಗೌಡ ಬಿರಾದರ ಮತ್ತು ಅನಿಲ ಜಮಾದಾರ ಮಾತನಾಡಿ, ಕೃಷ್ಣಾ ನದಿ ಮುಖಾಂತರ ತಾಲೂಕಿನ ಕೆರೆಗಳನ್ನು ತುಂಬಿಸಲು ನೀರು ಹರಿಸುವ ಪ್ರಕ್ರಿಯೆ ಸದ್ಯ ಪ್ರಾರಂಭವಾಗಿದೆ. ಕೆರೆಗಳು ಸಂಪೂರ್ಣವಾಗಿ ತುಂಬಿದ ತಕ್ಷಣವೇ ನಿಲ್ಲಿಸದೇ, ಕಾಲುವೆಗಳ ಮುಖಾಂತರ ರೈತರ ಜಮೀನುಗಳಿಗೂ ನೀರು ಹರಿಸಲು ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರಿಗೆ ತಲುಪಬೇಕಾದ ವೃದ್ಧಾಪ್ಯ ವೇತನದ ಅನುದಾನವನ್ನು ಸರ್ಕಾರ ಸದ್ಯ ತಡೆಹಿಡಿದಿದೆ. ಇದರಿಂದಾಗಿ ತಾಲೂಕಿನ ನೂರಾರು ವೃದ್ಧರು ಜೀವನ ನಡೆಸಲು ಕಷ್ಟಪಡುತ್ತಿದ್ದಾರೆ. ತಡೆಹಿಡಿದಿರುವ ವೃದ್ಧಾಪ್ಯ ವೇತನದ ಅನುದಾನವನ್ನು ತಕ್ಷಣವೇ ಬಿಡುಗಡೆ ಮಾಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಈ ಎಲ್ಲ ಪ್ರಮುಖ ಬೇಡಿಕೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ನಿರ್ಲಕ್ಷ್ಯ ವಹಿಸಿದರೆ ಅಥವಾ ಅಭಿವೃದ್ಧಿ ಕಾರ್ಯಗಳಿಗೆ ವೇಗ ನೀಡದಿದ್ದರೆ ಮುಂದಿನ ದಿನಗಳಲ್ಲಿ ತಾಲೂಕಿನಾದ್ಯಂತ ಸರ್ಕಾರದ ವಿರುದ್ಧ ಉಗ್ರ ಹೋರಾಟ ರೂಪಿಸಲಾಗುವುದು ಎಂದು ಬಿಜೆಪಿ ಮುಖಂಡರು ಜಂಟಿಯಾಗಿ ಎಚ್ಚರಿಕೆ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಮಂಡಲ ಪ್ರಧಾನ ಕಾರ್ಯದರ್ಶಿ ದೇವೇಂದ್ರ ಕುಂಬಾರ, ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಶಿವು ಬಗಲಿ, ರೈತ ಮೋರ್ಚಾ ಅಧ್ಯಕ್ಷ ಚೆನ್ನಯ್ಯ ಹಿರೇಮಠ, ನಾಗೇಶ ಹೆಗಡ್ಯಾಳ, ವೀರನಗೌಡ ಪಾಟೀಲ, ಸಂತೋಷ ಪಾಟೀಲ, ಬಾಗಪ್ಪ ನಾವಿ ಸೇರಿದಂತೆ ಪಕ್ಷದ ಇನ್ನಿತರ ಪ್ರಮುಖರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.



# ಬಣಜಿಗ ಸಮಾಜಕ್ಕೆ '2ಎ' ಮೀಸಲಾತಿಗೆ ಆಗ್ರಹಿಸಿ ಮನವಿ

■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಬಣಜಿಗ ಸಮಾಜಕ್ಕೆ 2ಎ ಮೀಸಲಾತಿ ಕಲ್ಪಿಸುವಂತೆ ಆಗ್ರಹಿಸಿ ಪಟ್ಟಣದ ಬಣಜಿಗ ಸಮಾಜದ ಮುಖಂಡರು ಸೋಮವಾರ ಮಾನ್ಯ ತಹಸೀಲ್ದಾರರ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು. ಬಣಜಿಗ ಸಮುದಾಯವು ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕವಾಗಿ ಹಿಂದುಳಿದಿದ್ದು, ಸಮುದಾಯದ ಯುವಕರಿಗೆ ಮತ್ತು ವಿದ್ಯಾರ್ಥಿಗಳಿಗೆ ಸೂಕ್ತ ಅವಕಾಶಗಳು ಸಿಗುತ್ತಿಲ್ಲ. ಹೀಗಾಗಿ ಸರ್ಕಾರ ತಕ್ಷಣವೇ ಎಚ್ಚೆತ್ತುಕೊಂಡು ಬಣಜಿಗ ಸಮಾಜವನ್ನು 2ಎ ಮೀಸಲಾತಿ ಪಟ್ಟಿಗೆ ಸೇರಿಸಬೇಕು ಎಂದು ಈ ಸಂದರ್ಭದಲ್ಲಿ ಮುಖಂಡರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಆಲಮೇಲ ಬಣಜಿಗ ಸಮಾಜದ ಅಧ್ಯಕ್ಷರಾದ ಸಿದ್ದಲಿಂಗ ಸುಬೇಧಾರ, ಪ್ರಧಾನ ಕಾರ್ಯದರ್ಶಿ ರವೀಂದ್ರ ವಾರದ, ಕೋಶಾಧಿಕಾರಿ ಶಿವಾನಂದ ಮಾರ್ಸನಳ್ಳಿ ಹಾಗೂ ಯುವ ಘಟಕದ ಅಧ್ಯಕ್ಷ ವಿಶ್ವ ಕೋರಳ್ಳಿ ಉಪಸ್ಥಿತ–ರಿದ್ದರು.

ಸಮಾಜದ ಪ್ರಮುಖ ಮುಖಂಡರಾದ ಡಾ. ಪ್ರಮೋದ್ ಮಹಾಜನ, ಗೊಲ್ಲಾಳ ಉಪ್ಪಿನ, ಮಲ್ಲು ಧನಶ್ರೀ, ಮಲ್ಲು ಅಚಲೇರಿ, ಬಾಬು ಜಾನಾ, ಶರಣು ಶ್ರೀಗಿರಿ, ಆನಂದ ಲಾಳಸಂಗಿ, ಸಂದೀಪ್ ಸೊನ್ನದ, ಈಸಪ್ಪ ಮಹಾಜನ, ಅಮರೇಶ್ ಸಾಲಕ್ಕಿ, ಈಸಪ್ಪ ತೆಲ್ಲೂರ, ಈರಣ್ಣ ತೆಲ್ಲೂರ, ಪ್ರಕಾಶ್ ಜಂಗಮಶೆಟ್ಟಿ ಸೇರಿದಂತೆ ಸಮುದಾಯದ ನೂರಾರು ಹಿರಿಯರು ಹಾಗೂ ಯುವಕರು ಭಾಗವಹಿಸಿದ್ದರು.

# ಅಪಾಯಕ್ಕೆ ಆಹ್ವಾನ ನೀಡುವಂತಿರುವ ಮುರಿದ ವಿದ್ಯುತ್ ಕಂಬ

■ ಉದಯರಶ್ಮಿ ದಿನಪತ್ರಿಕೆ




ದೇವರಹಿಪ್ಪರಗಿ: ಬಿ.ಬಿ.ಇಂಗಳಗಿ ಗ್ರಾಮದ ಮುಖ್ಯ ರಸ್ತೆಯಲ್ಲಿನ ವಿದ್ಯುತ್ ಕಂಬ ಮು–ರಿದು ಬಾಗಿದ್ದು ಅಪಾಯಕ್ಕೆ ಆಹ್ವಾನ ನೀಡುವಂತಿದ್ದು, ಕೂಡಲೇ ಬದಲಾಯಿಸಲು ಗ್ರಾಮಸ್ಥರು ಆಗ್ರಹಿಸಿದ್ದಾರೆ. ಗ್ರಾಮದ ಕೊಂಡಗೂಳಿ ರಸ್ತೆಯಲ್ಲಿನ ವಿದ್ಯುತ್ ಕಂಬಕ್ಕೆ ಯಾವುದೇ ವಾಹನ ಡಿಕ್ಕಿಯಾದ ಪರಿಣಾಮ ಕಳೆದ ಐದು ದಿನಗಳಿಂದ ಮುರಿದು ಬಾಗಿದ್ದು ಬೀಳುವ ಸ್ಥಿತಿಯಲ್ಲಿದೆ.

ಈ ಕುರಿತು ಗ್ರಾಮದ ಪಂಚಾಯಿತಿ ನಿಕಟಪೂರ್ವ ಸದಸ್ಯ ಸಲೀಮ್ ವಠಾರ ಮಾತನಾಡಿ, ಇಲ್ಲಿನ ಬೀಳುವ ಸ್ಥಿತಿಯಲ್ಲಿನ ಕಂಬಕ್ಕೆ ಹೆಸ್ಕಾಂ ದೇವರಹಿಪ್ಪರಗಿ ಉಪವಿಭಾಗದ ಕೋರವಾರ ಶಾಖೆಯ ಶಾಖಾಧಿಕಾರಿ ಶರಣಬಸು ಮ್ಯಾಗೇರಿ ಭೇಟಿ ನೀಡಿದ್ದು, ಆದರೆ ಈವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಈ ಕುರಿತು ವಿಚಾರಿಸಲಾಗಿ ಕಂಬಕ್ಕೆ ಅಪಾಯ ಮಾಡಿದ ವಾಹನದ ಮೇಲೆ ದೂರು ನೀಡಿ ನಂತರ ಕಂಬ ಬದಲಾವಣೆ ಮಾಡಲಾಗುತ್ತದೆ ಎಂದು ಬೇಜವಾಬ್ದಾರಿ ಉತ್ತರ ನೀಡುತ್ತಾರೆ.

ಅಪಾಯ, ಅನಾಹುತ ಯಾರನ್ನು ಕೇಳಿ ಬರುವುದಿಲ್ಲ. ಈಗ ಆಷಾಢ ಮಾಸದಲ್ಲಿ ಗಾಳಿ ಪ್ರಬಲವಾಗಿ ಬೀಸುತ್ತಿದ್ದು ಒಂದು ವೇಳೆ ಹಗಲಿನಲ್ಲಿ ಬಿದ್ದರೇ ಅನಾಹುತ ಆಗುವುದರಲ್ಲಿ ಯಾವುದೇ ಸಂದೇಹವಿಲ್ಲ. ಈ ರಸ್ತೆಯಲ್ಲಿ ನಿತ್ಯ ಶಾಲಾಮಕ್ಕಳು, ಸಾರ್ವಜನಿಕರು ಸಂಚರಿಸುತ್ತಿದ್ದು ಅಪಾಯ ಆಗುವ ಮೊದಲೇ ಇಲಾಖೆ ಅಗತ್ಯ ಕ್ರಮ ಕೈಗೊಳ್ಳಬೇಕು. ಒಂದು ವೇಳೆ ಅನಾಹುತವೇನಾದರೂ ಆದಲ್ಲಿ ಅದಕ್ಕೆ ಕೋರವಾರ ಶಾಖೆಯ ಶಾಖಾಧಿಕಾರಿಗಳ ನಿರ್ಲಕ್ಷ್ಯ ಕಾರಣ ಎನ್ನಬೇಕಾಗುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಗ್ರಾಮದ ಹುಸೇನಿ ದೊಡಮನಿ, ಶಿವಣ್ಣ ದಲ್ಲಾಳಿ, ಕುರ್ಬಾನ ದೊಡಮನಿ, ಶಿವರಾಯ ಮಾದರ, ಮೀರಾವಲಿ ದೊಡಮನಿ ಕೂಡಲೇ ಕಂಬ ಬದಲಾವಣೆ ಮಾಡಬೇಕು ಎನ್ನುತ್ತಾರೆ.




# ಎ.ಬಿ.ಜತ್ತಿ ಪಪೂ ಕಾಲೇಜು ಮಕ್ಕಳಲ್ಲಿ ಚುನಾವಣೆ ಅರಿವು

■ ಉದಯರಶ್ಮಿ ದಿನಪತ್ರಿಕೆ

ತಿಕೋಟಾ: ಪಟ್ಟಣದ ಬಿಎಲ್‌ಡಿಇ ಸಂಸ್ಥೆಯ ಎ. ಬಿ. ಜತ್ತಿ ಪದವಿಪೂರ್ವ ಕಾಲೇಜಿನಲ್ಲಿ ಶಾಲಾ ಸಂಸತ್ ಚುನಾವಣೆ ನಡೆಯಿತು.

ಚುನಾವಣೆ ನಿಮಿತ್ಯ ಕಾಲೇಜು ವಿದ್ಯಾರ್ಥಿಗಳಿಗೆ ಶಾಲಾ ಸಂಸತ್ ಕುರಿತು ಪ್ರಾಚಾರ್ಯ ಕವಿತಾ ಹೊಸಟ್ಟಿ ಮಾತನಾಡಿ, ಭಾರತವು ಒಂದು ಪ್ರಜಾಪ್ರಭುತ್ವ ರಾಷ್ಟ್ರವಾಗಿದ್ದು, ಮತ ಚಲಾಯಿಸು ಹಕ್ಕು ಪ್ರಜೆಗಳಿಗೆ ಮಾತ್ರ ಇರುವದು. ಮುಂದಿನ ದಿನಗಳಲ್ಲಿ ಇಂದಿನ ಯುವಕರು ನಾಳಿನ ನಾರಿಕರಾಗುವರು. ಬದ್ರಬುನಾದಿ ರಾಷ್ಟ್ರದ ನಿರ್ಮಾಣಕ್ಕೆ ಯುವಕರ ಪಾತ್ರ ಮುಖ್ಯವಾಗಿದೆ. ಚುನಾವಣೆ ಹೇಗೆ ನಡೆಯುತ್ತದೆ ಎಂಬುದನ್ನು ಕಾಲೇಜು ಮಟ್ಟದಲ್ಲಿ ವಿದ್ಯಾರ್ಥಿಗಳಲ್ಲಿ ಮತದಾನದ ಅರಿವು ಇದರಿಂದ ಮೂಡುತ್ತದೆ ಎಂದರು.

ಬಿ. ಎಲ್. ನಾಟೀಕಾರ, ಎಂ. ಕೆ. ತುಂಗಳ ಮಾತನಾಡಿ ಮತದಾನದ ನಮ್ಮ ಹಕ್ಕು, ಈ ಹಕ್ಕನ್ನು ಯಾರು ಕಸಿದುಕೋಳ್ಳುವದಿಲ್ಲ. ಪ್ರತಿಯೊಬ್ಬರು ಅರಿತುಕೊಳ್ಳಬೇಕು. ಮುಂಬರುವ ದಿನಗಳಲ್ಲಿ ಭಾರತದ ಭವಿಷ್ಯ ನಿಮ್ಮ ಕೈಯಲ್ಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಉಪನ್ಯಾಸಕರು, ಭೋದಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಇದ್ದರು.

## ಬಬಲೇಶ್ವರ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಪಿ.ಜಿ.ಗಡೇದ ಪ್ರಕಟಣೆ

# ಸೆಪ್ಟಿಕ್ ಟ್ಯಾಂಕ್ ಕೆಲಸಗಾರರ ಮೂಲಕ ಸ್ವಚ್ಛಗೊಳಿಸುವುದು ಅಪರಾಧ

■ ಉದಯರಶ್ಮಿ ದಿನಪತ್ರಿಕೆ

ಬಬಲೇಶ್ವರ: ಪಟ್ಟಣದ ಎಲ್ಲಾ ಮನೆಗಳಲ್ಲಿ ಇರುವ ಶೌಚಾಲಯದ ಸೆಪ್ಟಿಕ್ ಟ್ಯಾಂಕ್‌ಗಳು ತುಂಬಿದಾಗ ಸೆಪ್ಟಿಕ್ ಟ್ಯಾಂಕ್‌ಗಳನ್ನು ಕೆಲಸಗಾರರ ಮೂಲಕ ನೇರವಾಗಿ ಸ್ವಚ್ಛಗೊಳಿಸುವುದು ಮ್ಯಾನುವಲ್ ಸ್ಕ್ಯಾವೆಂಜರ್ ಕಾಯ್ದೆ 2013 ರ ಪ್ರಕಾರ ಶಿಕ್ಷಾರ್ಹ ಅಪರಾಧವಾಗಿದ್ದು, ಸಾರ್ವಜನಿಕರು ಕೆಲಸಗಾರರ ಮೂಲಕ ಸೆಪ್ಟಿಕ್ ಟ್ಯಾಂಕ್ ಸ್ವಚ್ಛಗೋಳಿಸಿದ್ದಲ್ಲಿ ಅಂತವರ ಮೇಲೆ ಮ್ಯಾನುವಲ್ ಸ್ಕ್ಯಾವೆಂಜರ್ ಕಾಯ್ದೆ 2013 ರ ಪ್ರಕಾರ ಶಿಸ್ತು ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಪಿ.ಜಿ.ಗಡೇದ ಪ್ರಕಟಣೆ ಮೂಲಕ ತಿಳಿಸಿದ್ದಾರೆ.ಪಟ್ಟಣದ ಯಾವುದೇ ಮನೆಗಳಲ್ಲಿ ಸೆಪ್ಟಿಕ್ ಟ್ಯಾಂಕ್‌ಗಳು ತುಂಬಿದಾಗ ತಾವು ಪ್ರೈವೇಟ್ ಸಕ್ಕಿಂಗ್ ಮಶೀನ್ ವಾಹನವನ್ನು ಬಾಡಿಗೆಗೆ ಹೇಳುತ್ತಿರುತ್ತಿರಿ. ಅದರಂತೆ ಇನ್ನು ಮುಂದೆ ತಮ್ಮ ಸೆಪ್ಟಿಕ್ ಟ್ಯಾಂಕ್ನು ಪ್ರೈವೇಟ್ ಸಕ್ಕಿಂಗ್ ಮಷಿನ್ ರವರ ಹತ್ತಿರ ಕ್ಲೀನ್ ಮಾಡಿಸುವ ಮುನ್ನ ಪಟ್ಟಣ ಪಂಚಾಯತ ಕಾರ್ಯಾಲಯಕ್ಕೆ ತಿಳಿಸುವುದು ಕಡ್ಡಾಯವಾಗಿರುತ್ತದೆ.

ಸಕ್ಕಿಂಗ್ ಮಷೀನ್ ವಾಹನದ ಮಾಲೀಕರು ತಾವು ಬಬಲೇಶ್ವರ ಪಟ್ಟಣದ ವ್ಯಾಪ್ತಿಯಲ್ಲಿ ಸೆಪ್ಟಿಕ್ ಟ್ಯಾಂಕನ್ನು ಕ್ಲೀನ್ ಮಾಡಿ ಸಂಗ್ರಹಿಸಿದ ಮಲತ್ಯಾಜ್ಯವನ್ನು ಕಾಲುವೆ, ಕೆರೆ, ಸಾರ್ವಜನಿಕ ಸ್ಥಳ ಹಾಗೂ ಎಲ್ಲೆಂದರಲ್ಲಿ ಅನಧಿಕೃತವಾಗಿ ವಿಸರ್ಜಿಸಿದರೆ ಪರಿಸರ ಸಂರಕ್ಷಣಾ ಕಾಯ್ದೆ 1986, ಜಲ (ಮಾಲಿನ್ಯ ತಡೆಗಟ್ಟುವಿಕೆ ಮತ್ತು ನಿಯಂತ್ರಣ) ಕಾಯ್ದೆ 1974 , ಪುರಸಭೆ ಕಾಯ್ದೆ 1964 ಹಾಗೂ ರಾಷ್ಟ್ರೀಯ ಹಸಿರು ನ್ಯಾಯಾಧಿಕರಣ (ಎನ್‌ಜಿಟಿ) ಕಠಿಣ ನಿರ್ದೇಶನಗಳ ಪ್ರಕಾರ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು.

ಪಟ್ಟಣ ಪಂಚಾಯತಿಯಿಂದ ನೂತನವಾಗಿ (ಎಫ್–ಎಸ್‌ಟಿಪಿ) ಘಟಕ ಪ್ರಾರಂಭವಾಗಿದ್ದು ಇನ್ನು ಮುಂದೆ ಸಕ್ಕಿಂಗ್ ಮಶೀನ್ ವಾಹನದ ಮಾಲೀಕರು ಬಬಲೇಶ್ವರ ಪಟ್ಟಣದ ವ್ಯಾಪ್ತಿಯಲ್ಲಿ ಸಂಗ್ರಹಿಸಿದ ಮಲ ತ್ಯಾಜ್ಯವನ್ನು ಪಟ್ಟಣ ಪಂಚಾಯತಿಯ (ಎಫ್‌ಎಸ್‌ಟಿಪಿ) ಘಟಕಕ್ಕೆ ಕಡ್ಡಾಯವಾಗಿ ನೀಡತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಬಬಲೇಶ್ವರ ಪಟ್ಟಣ ಪಂಚಾಯತ ಕಾರ್ಯಾಲಯದ ಸಮಯದಲ್ಲಿ ಆರೋಗ್ಯ ಶಾಖೆಗೆ ಬೇಟಿಯಾಗಲು ಮುಖ್ಯಾಧಿಕಾರಿಗಳು ಹಾಗೂ ಆಡಳಿತಾಧಿಕಾರಿಗಳು ಪ್ರಕಟಣೆ ಮೂಲಕ ತಿಳಿಸಿದ್ದಾರೆ

# ಸಿಸಿ ರಸ್ತೆ–ಚರಂಡಿ ಕಾಮಗಾರಿಗೆ ಶಾಸಕ ಮನಗೂಳಿ ಭೂಮಿಪೂಜೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ನಗರದ ಸೌಂದರ್ಯೀಕರಣಕ್ಕೆ 34 ರಸೆಗಳ ಅಭಿವೃದ್ಧಿಗೆ ಒಟ್ಟು ರೂ.25 ಕೋಟಿ ಅನುದಾನ ತರಲಾಗಿದ್ದು, ಈ ರಸ್ತೆ 6ನೇ ಕಾಮಗಾರಿಗೆ ಭೂಮಿಪೂಜೆ ನೇರವೇರಿಸಲಾಗಿದೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಸಿಂದಗಿ ನಗರದ ಪಂಚತಂತ್ರ ಶಾಲೆಯ ಸಮೀಪ ಮುಖ್ಯಮಂತ್ರಿ ಮೂಲಭೂತ ಸೌಕರ್ಯ ಅಭಿವೃದ್ಧಿ ಯೋಜನೆಯಡಿ ರೂ.20ಲಕ್ಷ ವೆಚ್ಚದಲ್ಲಿ ನಿರ್ಮಾಣವಾಗಲಿರುವ ಸಿಸಿ ರಸ್ತೆ ಹಾಗೂ ಚರಂಡಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ನಗರದ ವಿವಿಧ ವಾರ್ಡ್ಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುತ್ತಿದ್ದು, ರಸ್ತೆ, ಚರಂಡಿ, ಕುಡಿಯುವ ನೀರು ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಬದ್ಧವಾಗಿದೆ. ಸಾರ್ವಜನಿಕರ ಸಹಕಾರದೊಂದಿಗೆ ಅಭಿವೃದ್ಧಿ ಕಾಮಗಾರಿಗಳನ್ನು ಗುಣಮಟ್ಟದಿಂದ ಹಾಗೂ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಿ ಮಾದರಿ ನಗರವನ್ನಾಗಿ ಅಭಿವೃದ್ಧಿ ಪಡಿಸುವುದು ನನ್ನ ಧ್ಯೇಯವಾಗಿದ್ದು, ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಪೂರಕವಾದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುವುದು ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ನಗರದ ಪಂಚತಂತ್ರ ಶಾಲೆ ಮುಂದುಗಡೆ ಮುಖ್ಯಮಂತ್ರಿಗಳ ಮೂಲಭೂತ ಸೌಕರ್ಯ ಅಭಿವೃದ್ಧಿ ಯೋಜನೆಯಡಿ ರೂ 20 ಲಕ್ಷ ವೆಚ್ಚದಲ್ಲಿ ಸಿಸಿ ಚರಂಡಿ ಹಾಗೂ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ನಗರದಲ್ಲಿ 56 ಸಾವಿರ ಜನಸಂಖ್ಯೆ ಹಾಗೂ 12600 ಮನೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ನಗರಸಭೆಗೆ ಸದ್ಯ ಇದ್ದ 51 ಸಿಬ್ಬಂದಿಗಳಿಂದ ಸ್ವಚ್ಛತೆ ಕಾರ್ಯ ವಿಳಂಬವಾಗಿ ನಡೆಯುತ್ತಿದ್ದು ಇನ್ನೂ 75 ಸಿಬಂದಿ ಭರ್ತಿಗೆ ಮಾಡಿಕೊಡುವಂತೆ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು ಇನ್ನೂ ಕೆಲವೇ ದಿನಗಳಲ್ಲಿ ಆ ಕಾರ್ಯ ಫಲಿಸಲಿದೆ ಅಲ್ಲಿಯವರೆಗೆ ಸಾರ್ವಜನಿಕರು ಸಹಕರಿಸಬೇಕು. ಈ ನಗರದಲ್ಲಿ ಒಟ್ಟು 109 ಕಿಮೀ ಒಳರಸ್ತೆಗಳೀಗೆ ಅವುಗಳು ಸಂಪೂರ್ಣ ಹಾಳಾದ ಬಗ್ಗೆ ನನ್ನ ಗಮನಕ್ಕಿದೆ ನನ್ನ ಅವಧಿ 3 ವರ್ಷವಾಗಿದೆ ಅದರಲ್ಲಿ ಮುಂದಿನ ಎರಡು ವರ್ಷಗಳಲ್ಲಿ ಕ್ಷೇತ್ರದ ಅಭಿವೃದ್ಧಿಗೆ ವೇಗ ನೀಡಿ, ಪ್ರತಿಯೊಬ್ಬ ನಾಗ–ರಿಕನಿಗೂ ಮೂಲಭೂತ ಸೌಕರ್ಯಗಳನ್ನು ತಲುಪಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತೇನೆ ಎಂದ ಅವರು, ಕಾಮಗಾರಿಯನ್ನು ಗುಣಮಟ್ಟದಿಂದ ಹಾಗೂ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಗುತ್ತಿಗೆದಾರರು ಮತ್ತು ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಪಂಚತಂತ್ರ ಶಾಲೆ ಅಧ್ಯಕ್ಷ ಎಸ್.ಜಿ.ಸಜ್ಜನ ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಎಂ.ಎ.ಖತೀಬ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಹಣಮಂತ ಸುಣಗಾರ, ಆಶ್ರಯ ಸಮಿತಿ ಸದಸ್ಯ ಭೀಮು ರೋಡಗಿ, ಅರವಿಂದ ಹಂಗರಗಿ, ಸಂದೀಪ ಚೌರ, ವಿಜಯಕುಮಾರ ಸಜ್ಜನ, ರಹಿಮ ಹುಂಡೇಕಾರ, ಮೋಸೀನ ಬೀಳಗಿ, ವರ್ಷಾ ಪಾಟೀಲ, ಜೆಇ ಎ.ಜೆ.ನಾಟೀಕಾರ ಸೇರಿದಂತೆ ಇಲಾಖೆಗಳ ಅಧಿಕಾರಿಗಳು, ಗುತ್ತಿಗೆದಾರರು, ಮುಖಂಡರು ಹಾಗೂ ಸ್ಥಳೀಯ ನಿವಾಸಿಗಳು ಇದ್ದರು.

## ಕುಡಿಯುವ ನೀರಿನ ಸಮಸ್ಯೆ ಕುರಿತ ಪ್ರಗತಿ ಪರಿಶೀಲನೆ ಸಭೆಯಲ್ಲಿ ಶಾಸಕ ಅಶೋಕ ಮನಗೂಳಿ ಅಧಿಕಾರಿಗಳಿಗೆ ಎಚ್ಚರಿಕೆ

# ಗ್ರಾಮಗಳಲ್ಲಿ ಕುಡಿವ ನೀರಿನ ಸಮಸ್ಯೆ ಇದ್ದರೆ ತಕ್ಷಣ ವರದಿ ನೀಡಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ನಾಗಾವಿ ಬಿಕೆ ಗ್ರಾಪಂ ವ್ಯಾಪ್ತಿಯ ಗೊರವಗುಂಡಗಿ ಗ್ರಾಮದ ಬಗ್ಗೆ, ರಾಂಪುರ ಪಿಎ ಗ್ರಾಪಂ ವ್ಯಾಪ್ತಿಯ ರಾಂಪುರ ಮತ್ತು ಗಣಿಹಾರ ಗ್ರಾಮಗಳ ವರದಿ ನೀಡಬೇಕು, ಗುಬ್ಬೆವಾಡ ಗ್ರಾಪಂ ವ್ಯಾಪ್ತಿಯ ಬೋರಗಿ ಮತ್ತು ಪುರದಾಳ ಗ್ರಾಮಗಳಲ್ಲಿ 2 ಬೋರವೆಲ್‌ಬೇಕು ಎಂದು ಶಾಸಕ ಅಶೋಕ ಮನಗೂಳಿ ತಿಳಿಸಿದರು.

ನಗರದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಶನಿವಾರ ಸಂಜೆ ಹಮ್ಮಿಕೊಂಡ ಕುಡಿಯುವ ನೀರಿನ ಸಮಸ್ಯೆ ಕುರಿತು ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಕ್ಷೇತ್ರದ ವ್ಯಾಪ್ತಿಯ ಎಲ್ಲ ಗ್ರಾಮ ಪಂಚಾಯತ್‌ಗಳಲ್ಲಿ ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದರೆ ತಕ್ಷಣ ವರದಿ ನೀಡಲು ಅಭಿವೃದ್ಧಿ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು. ಅದೇ ರೀತಿ ಚಾಂದಕವಟೆ ಪಂಚಾಯತ್ ವ್ಯಾಪ್ತಿಯ ಕೆರೆಯಲ್ಲಿ ಟಿಸಿ ಬದಲಿಸಬೇಕು. ಸುರಗಿಹಳ್ಳಿ ಗ್ರಾಮದಲ್ಲಿ ಪದೇ ಪದೇ ಟಿಸಿ ಸುಡುತ್ತಿದೆ ಪಿಡಿಓ ಮಾಹಿತಿ ನೀಡಬೇಕು ಎಂದರು.

ಬ್ಯಾಕೋಡ ಗ್ರಾಮ ಪಂಚಾಯತ್ ವ್ಯಾಪ್ತಿಯ ಮಾಡಬಾಳ, ಮನ್ನಾಪುರ, ಅಂತರಗಂಗಿ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಇರುತ್ತದೆ, ಹಿಕ್ಕನಗುತ್ತಿ, ಯರಗಾಲ್ ಬಿಕೆ, ಕೊಕಟನೂರು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ನೀರಿನ ಸಮಸ್ಯೆ ಇರುವದಿಲ್ಲ ಎಂದು ಪಿಡಿಓ ಅವರು ತಿಳಿಸಿದರು. ಗೋಲಗೇರಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಸಾಸಾಬಾಳ ಗ್ರಾಮದ ಲಕ್ಷ್ಮೀ ಗುಡಿ ಹತ್ತಿರ ಒಂದು ಬೋರವೆಲ್ ಯಂಕಂಚಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಯಂಕಂಚಿ ಮತ್ತು ಖೈನೂರ ಗ್ರಾಮದ ಎಸ್‌ಸಿ ಕಾಲೋನಿ ಯಲ್ಲಿ ಬೋರವೆಲ್, ಮರಗಮ್ಮ ಗುಡಿ ಹತ್ತಿರ, ಜಟ್ಟೆಪ್ಪ ನಗರಗಳಲ್ಲಿ ಬೋರವೆಲ್. ಚಟ್ಟರಕಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಸೋಂಪುರ ಗ್ರಾಮಕ್ಕೆ ಒಂದು ಬೋರವೆಲ್, ಕನ್ನೊಳ್ಳಿ ಒಂದು ಬೋರವೆಲ್, ಹಂದಿಗನೂರು ಗ್ರಾಮ ಪಂಚಾಯತ್ ವ್ಯಾಪ್ತಿಯ ತಾಂಡದಲ್ಲಿ ಒಂದು ಬೋರವೆಲ್ ಬೇಕು ಎಂದು ಎಲ್ಲ ಪಂಚಾಯತ್ ಅಭಿವೃದ್ಧಿ ಅಧಿಕಾ–ರಿಗಳು ಮಾನ್ಯ ಶಾಸಕರು ಇವರ ಸಭೆಯಲ್ಲಿ ಮಾಹಿತಿ ನೀಡಿದರು.

ಸಭೆಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ರಾಮು ಅಗ್ನಿ, ಜಿಲ್ಲಾ ಕೆಡಿಪಿ ಸದಸ್ಯರಾದ ನೂರಹ್ಮದ ಅತ್ತಾರ, ಶಿವಾನಂದ ಕೊಟರಗಸ್ತಿ, ತಾಲೂಕು ಕೆಡಿಪಿ ಸದಸ್ಯರಾದ ಸುರೇಶ ಚೌಧರಿ, ಅಯ್ಯಪ್ಪ ಕಟ್ಟಿಮನಿ, ಮಹಾನಂದಾ ಬಮ್ಮಣ್ಣಿ ಸೇರಿದಂತೆ ಎಲ್ಲ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಹಾಗೂ ಸಿಬ್ಬಂದಿಗಳು ಹಾಜರಿದ್ದರು.

### ಪ್ರಗತಿ ಪರಿಶೀಲನಾ ಸಭೆಯಲ್ಲಿ ಪತ್ರಕರ್ತರಿಗೆ ಪ್ರವೇಶವಿಲ್ಲ!

ಸಾಮಾನ್ಯವಾಗಿ ಸಾರ್ವಜನಿಕ ಸಮಸ್ಯೆಗಳು, ಅಭಿವೃದ್ಧಿ ಕಾಮಗಾರಿಗಳು ಹಾಗೂ ಜನರ ಹಿತಾಸಕ್ತಿಗೆ ಸಂಬಂಧಿಸಿದ ಸಭೆಗಳ ಮಾಹಿತಿಯನ್ನು ಜನರಿಗೆ ತಲುಪಿಸುವಲ್ಲಿ ಮಾಧ್ಯಮಗಳ ಪಾತ್ರ ಮಹತ್ವದ್ದು. ಆದರೆ ಸಿಂಧಗಿ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ಅಧಿಕಾರಿಗಳು ಪ್ರಗತಿ ಪರಿಶೀಲನಾ ಸಭೆ ಸಂದರ್ಭದಲ್ಲಿ ಪತ್ರಕರ್ತರಿಗೆ ಹೊರಗಿಟ್ಟು ಸಭೆ ಮಾಡಲಾಗಿದೆ.



ಕಲಬುರಗಿ: ಆಮರಣಾಂತ ಉಪವಾಸ ಸತ್ಯಾಗ್ರಹಿ ಸೋನಮ್ ವಾಂಗಚುಕ್ ಅವರ ಆರೋಗ್ಯ ರಕ್ಷಣೆಗೆ ಮೊದಲ ಆದ್ಯತೆ ನೀಡುವದು, ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಹಗರಣದ ತನಿಖೆ ಸೇರಿದಂತೆ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಇಂದು ದಲಿತ ಸೇನೆಯಿಂದ ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು. ದಲಿತ ಸೇನೆ ರಾಜ್ಯಾಧ್ಯಕ್ಷ ಹಣಮಂತ ಯಳಸಂಗಿ,ಮಂಜುನಾಥ ಭಂಡಾರಿ,ಶಿವಲಿಂಗಪ್ಪ ದೊಡ್ಡಮನಿ,ಶಿವಲಿಂಗ ಮಾಡ್ಯಾಳಕರ್,ಕಪಿಲ ವಾಲಿ,ಸುನೀಲ ಸಿಂಧೆ ,ಪಂಚಶೀಲ ಚಾಂಬಾಳ ಸೇರಿದಂತೆ ಹಲವರು ಪಾಲ್ಗೊಂಡರು.



ಕಲಬುರಗಿ : ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ( ಎಸ್‌ಐಆರ್ ) ಜಾಗೃತಿ ಕುರಿತು ಜಿಲ್ಲಾಡಳಿತ,ಜಿಲ್ಲಾ ಸ್ವೀಪ್ ಸಮಿತಿ ಆಯೋಜಿಸಿದ ಬೈಕ್ ಜಾಗೃತಿ ಜಾಥಾಕ್ಕೆ ಜಿಪಂ ಸಿಇಒ ರಾಹುಲ್ ಸಂಕನೂರ್ ಅವರು ಚಾಲನೆ ನೀಡಿದರು.ಪಾಲಿಕೆ ಆಯುಕ್ತ ಅವಿನಾಶ ಸಿಂಧೆ ಸಂಜೀವನ್, ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ವಿಕಲಚೇತನ ಸಂಘಟನೆಯವರು ಬೈಕ್‌ಜಾಗೃತಿ ಜಾಥಾದಲ್ಲಿ ಭಾಗವಹಿಸಿ ಜಾಗೃತಿ ಮೂಡಿಸಿದರು.




ಕಲಬುರಗಿ: ಎಲೆಕ್ಟ್ರಿಕಲ್ ಆಟೋಗಳ ನೋಂದಣಿ ತಾತ್ಕಾಲಿಕ ತಡೆ ಹಾಗೂ ಅನಧಿಕೃತ ಬೈಕ್ ಟ್ಯಾಕ್ಸಿ,ಆಟೋಗಳ ಸಂಚಾರ ತಡೆಯುವಂತೆ ಆಗ್ರಹಿಸಿ ಇಂದು ಕಲ್ಯಾಣ ಕರ್ನಾಟಕ ಆಟೋ ಚಾಲಕರ ಸಂಘ ಹಾಗೂ ವಿವಿಧ ಆಟೋ ಸಂಘ,ಸ್ಟ್ಯಾಂಗಳ ವತಿಯಿಂದ ಜಗತ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆ ನಡೆಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.ಕಲ್ಯಾಣ ಕರ್ನಾಟಕ ಆಟೋ ಚಾಲಕರ ಸಂಘದ ಅಧ್ಯಕ್ಷ ಲಕ್ಷ್ಮೀಕಾಂತ ಮಾಲಿ ಪಾಟೀಲ ,ಚಿದಾನಂದಣೆಕರ್,ಮೊಹಸೀನ್,ಜುಬೇರ್, ಪ್ರವೀಣರೆಡ್ಡಿ,ಆನಂದ, ಶ್ರೀಮಂತ,ಅನೀಲ ಚವ್ಹಾಣ,ಸಂಜುಕುಮಾರ,ಎಂಡಿ ಹುಸೇನ್ ಸೇರಿದಂತೆ ಹಲವರು ಪಾಲ್ಗೊಂಡರು.




ಕಲಬುರಗಿ: ಕಲಬುರಗಿ ಜಿಲ್ಲೆಯನ್ನು ಬರಗಾಲಪೀಡಿತ ಪ್ರದೇಶ ಎಂದು ಘೋಷಿಸಿ,ತುರ್ತು ಪರಿಹಾರ ಪ್ಯಾಕೇಜ್ ಬಿಡುಗಡೆಗೆ ಆಗ್ರಹಿಸಿ ಇಂದು ಅಖಿಲ ಭಾರತ ರೈತ ಕೃಷಿ ಕಾರ್ಮಿಕರ ಸಂಘಟನೆ ಜಿಲ್ಲಾ ಸಮಿತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು. ಜಿಲ್ಲಾಧ್ಯಕ್ಷ ಗಣಪತರಾವ ಮಾನೆ,ಮಹೇಶ ಎಸ್.ಬಿ ಸೇರಿದಂತೆ ಹಲವರು ಪಾಲ್ಗೊಂಡರು.

# ಸತ್ಯ ಶರಣರು ತಿಳಿಯುವ ಪ್ರಭುಲಿಂಗಲೀಲೆ



ಕಲಬುರಗಿ: ಚಾಮರಸ ಕೇವಲ ಒಬ್ಬ ಕವಿಯಲ್ಲ. ನೂರೊಂದು ಜನ ವಿರಕ್ತರಲ್ಲಿ ಒಬ್ಬ ಪರಮ ವಿರಾಗಿ. ಜೊತೆಗೆ ಜ್ಞಾನಿ. ಅನುಭಾವಿ. ಅಲ್ಲಮರನ್ನು ವೈರಾಗ್ಯಪಥದ ಮಹಾಬೆಳಕು ಮಾಡಿಕೊಂಡವರು. ಪ್ರಭುಗಳ ಲೀಲಾಮಯ ಚರಿತ್ರೆಯನ್ನು ಬಹು ಸುಂದರವಾಗಿ,ತಾತ್ವಿಕವಾಗಿ ಅರ್ಥಪೂರ್ಣವಾಗಿ, ಕೇಳುಗರು ನಿತ್ಯಾನಂದದಲ್ಲಿ ನಿಬ್ಬೆರಗಾಗಿ ಮೈಮರೆವಂತೆ ಪ್ರಭುಲಿಂಗಲೀಲೆ ರಚಿಸಿದ್ದಾನೆ.

ಕುರಿಗಳೋಪಾದಿಯಲಿ ಕಬ್ಬಿನ । ಹೊರಗಣೆಲೆಯನೆ ಮೇದಕಟ ಮೆಲ ।ಕಿರಿವುತಲ್ಪಸುಖಕ್ಕೆ ಸೋಲದೆ ಕಬ್ಬಿನೊಳುರಸವ॥ ನೆರೆ ಸವಿವ ಗಜದಂತೆ ಭಕ್ತಿಯ । ತೆರನ ತಿಳಿದಾಚರಿಸಬೇಕೆಂ ದರಿವವರು

ಲಾಲಿಸುವುದೀ ಪ್ರಭುಲಿಂಗಲೀಲೆಯನು ಸಾಕಾರ ನಿರಾಕಾರದೊಳಗೆ ನಿರವಯಂಗನಾಗಿ ಸುಳಿದು ಎನ್ನುವ ವಚನದಲ್ಲಿ ಬಸವಣ್ಣನವರು ಸಾಕಾರ-ನಿರಾಕಾರಗಳಲ್ಲಿಜಂಗಮವಾಗಿ ನೆಲೆಸಿ, ಭಕ್ತರ ಸಂಕಷ್ಟಗಳನ್ನು ಪರಿಹರಿಸುವ ಶಿವನ ಲೀಲೆಯನ್ನು ಈ ವಚನದಲ್ಲಿ ವರ್ಣಿಸಿದ್ದಾರೆ. ಶಿವನನಿರವಯಂಗ ರೂಪದ ಮಹತ್ವ ಮತ್ತು ಭಕ್ತರ ಮೇಲಿನ ಅನುಗ್ರಹವನ್ನು ಕವಿಯು ಇಲ್ಲಿ ಕೊಂಡಾಡಿದ್ದಾರೆ.

ಲೌಕಿಕ ಜಗತ್ತಿನ ಮಾನವರು ಹೊಟ್ಟೆ ಎಂದು ಬಡಿದಾಟ, ಹೋರಾಟ ಮಾಡಿದರೆ ಹೊಟ್ಟೆ ಎಂಬುದನ್ನು ಮೆಟ್ಟಿ ನಿಂತ ಶರಣರಚರಿತೆ ಆಷಾಢಭೂತಿಗಳಿಗೆ, ಅಜ್ಞಾನಿಗಳಿಗೆ ಅಲ್ಲ. ಸತ್ಯ ಶರಣರು ತಿಳಿವುದೀ ಪ್ರಭುಲಿಂಗಲೀಲೆ ಎಂದು ಚಾಮರಸ ಕವಿ ಹೇಳಿದ್ದಾನೆ.ಮಾಡುವಾತ ನಾನಲ್ಲಯ್ಯಾ ನೀಡುವಾತ ನಾನಲ್ಲಯ್ಯಾ ಬೇಡುವಾತ ನಾನಲ್ಲಯ್ಯಾ ನಿಮ್ಮ ಕಾರುಣ್ಯವಲ್ಲದೆ. ಎಲೆ ದೇವಾ ಮನೆಯ ತೊತ್ತು ಅಲಸಿದಡೆ ಒಡತಿ ಮಾಡಿಕೊಂಬಂತೆ ನಿನಗೆ ನೀ ಮಾಡಿಕೊ ಕೂಡಲಸಂಗಮದೇವಾ

ಈ ವಚನವು ಸಂಪೂರ್ಣ ಶರಣಾಗತಿಯ ಮತ್ತು ನಿಷ್ಕಾಮ ಕರ್ಮದ ತತ್ವವನ್ನು ಸಾರುತ್ತದೆ. ಮನುಷ್ಯನಿಗೆ ಅಹಂಕಾರ ಸಲ್ಲದು;ಎಲ್ಲದಕ್ಕೂ ಭಗವಂತನ ಕೃಪೆಯೇ ಕಾರಣ ಎಂಬುದನ್ನು ಹೇಳಿಕೊಡುತ್ತದೆ.

ಚಾಮರಸರು ಅಲ್ಲಮರ ವೈರಾಗ್ಯ ಸತ್ಯವನ್ನು ಹೇಳುತ್ತ ಪರುಷದಂಗವ ಎನ್ನುವ ಸಾಲುಗಳ ಮೂಲಕ ಅಲ್ಲಮರ ತತ್ವಕ್ಕೆತಲೆಬಾಗಿ, ಶರಣಾಗತರಾದಾಗ ಮಾತ್ರ ಅಲ್ಲಮನ ಸಾನ್ನಿಧ್ಯ ದೊರೆಯಲಿದೆ. ಆಗ ನಮ್ಮ ಗತಿಯೂ ಬದಲಾಗಲಿದೆ ಎಂದುಗುಹೇಶ್ವರನ ಲೀಲೆಯನ್ನು ವಿವರಿಸುತ್ತಾರೆ.

-ಪೂಜ್ಯ ಮಹಾಂತಸ್ವಾಮಿಗಳು,
ಕಲ್ಯಾಣಾಶ್ರಮ, ಮುದಗಲ್

## ಉತ್ತಮ ಆರೋಗ್ಯಕ್ಕಾಗಿ ವ್ಯಾಯಾಮ ಮಾಡಲು ಶಾಸಕ ಅನಿಲ್ ಚಿಕ್ಕಮಾದು ಸಲಹೆ

# ಲಾಟರಿ, ಡ್ರಗ್ಸ್, ಗಾಂಜಾ, ಜೂಜಾಟಕ್ಕೆ ಖಾಕಿ ಕಡಿವಾಣ

■ ಉದಯರಶ್ಮಿ ದಿನಪತ್ರಿಕೆ

ಎಚ್ ಡಿ ಕೋಟೆ: ಇತ್ತೀಚಿನ ದಿನಗಳಲ್ಲಿ ನಮ್ಮ ತಾಲೂಕಿನಲ್ಲಿ ಲಾಟರಿ, ಡ್ರಗ್ಸ್, ಗಾಂಜಾ, ಜೂಜಾಟ ಪ್ರಕರಣಗಳು ಕಡಿಮೆಯಾಗಿವೆ. ಕೇರಳ ಲಾಟರಿ ಸಂಬಂಧ 18 ಜನರ ವಿರುದ್ಧ ಕೇಸ್ ದಾಖಲಿಸಿ, ಕಾನೂನು ಕ್ರಮ ಕೈಗೊಂಡಿದ್ದಾರೆ. ಇದಕ್ಕೆ ನಾನು ಪೊಲೀಸರಿಗೆ ಧನ್ಯವಾದ ಹೇಳುತ್ತೇನೆ ಎಂದು ಶಾಸಕ ಅನಿಲ್ ಚಿಕ್ಕಮಾದು ಹೇಳಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಎಚ್ ಡಿ ಕೋಟೆ ಪೊಲೀಸ್ ಠಾಣೆ ವತಿಯಿಂದ ಹಮ್ಮಿಕೊಂಡಿದ್ದ ಡ್ರಗ್ಸ್ ವ್ಯಸನ ಮುಕ್ತ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಯುವಕರು ತಮ್ಮ ಗ್ರಾಮಗಳಲ್ಲಿ ಬೆಳಗ್ಗೆ 5 ಅಥವಾ 6 ಗಂಟೆಗೆ ಎದ್ದು ವ್ಯಾಯಾಮ ಮಾಡಬೇಕು. ವಾಕಿಂಗ್, ಜಾಗಿಂಗ್ ಮಾಡುವ ಮೂಲಕ ಆರೋಗ್ಯ ಕಾಪಾಡಿಕೊಳ್ಳಬೇಕು. ಯಾರನ್ನ ಸ್ನೇಹ ಮಾಡಬೇಕು, ಮಾಡಬಾರದು ಎಂಬುದರ ಅರಿವು ನಿಮಗೆ ಇರಬೇಕು. ಯಾಕಂದ್ರೆ ಇತ್ತೀಚಿನ ದಿನಗಳಲ್ಲಿ ಸ್ನೇಹಿತರಿಂದಲೇ ಅದೆಷ್ಟೋ ಮಂದಿ ದಾರಿ ತಪ್ಪುತ್ತಿದ್ದಾರೆ. ಅಡ್ಡದಾರಿ ಹಿಡಿಯುತ್ತಿದ್ದಾರೆ. ಹಣವನ್ನು ಯಾವುದೇ ವಯಸ್ಸಿನಲ್ಲಾದರೂ ಯಾವಾಗಲಾದರೂ ಸಂಪಾದನೆ ಮಾಡಬಹುದು. ಆದರೆ ಆರೋಗ್ಯ ಸಂಪಾದನೆ ಮಾಡಲು ಸಾಧ್ಯವಿಲ್ಲ. ಹೀಗಾಗಿ ಆರೋಗ್ಯದತ್ತ ಹೆಚ್ಚು ಗಮನಹರಿಸಬೇಕು ಎಂದು ಹೇಳಿದರು.

ತಾಲೂಕು ಆರೋಗ್ಯ ಅಧಿಕಾರಿ ಡಾ. ರವಿಕುಮಾರ್ ಮಾತನಾಡಿ, ಇಂದಿನ ದಿನಗಳಲ್ಲಿ ಯುವ ಜನರು ಮಾದಕ ವಸ್ತುಗಳತ್ತ ಹೆಚ್ಚು ಆಕರ್ಷಿತರಾಗುತ್ತಿದ್ದಾರೆ.ಯಾವುದೊ ಒಂದು ರೀತಿಯಲ್ಲಿ ಸಂತೋಷ ಸಿಗುತ್ತದೆ. ಮಜಾ ಸಿಗುತ್ತದೆ. ಆ ಕ್ಷಣದಲ್ಲಿ ಎಲ್ಲವನ್ನು ಮೈಮರೆಸುತ್ತೆ ಎಂಬ ಭ್ರಮೆಯಿಂದ ಯುವಪೀಳಿಗೆ ಮಾದಕವ್ಯಸನಿಗಳುತ್ತಾರೆ. ದಯವಿಟ್ಟು ಈ ಒಂದು ಡ್ರಗ್ಸ್ ಚಟದಿಂದ ಹೊರಬಂದು, ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳುವ ಮೂಲಕ ಸಮಾಜಕ್ಕೆ ಮಾದರಿಯಾಗಬೇಕು ಎಂದು ಕಿವಿ ಮಾತು ಹೇಳಿದರು.




### ಡ್ರಗ್ಸ್ ವ್ಯಸನ ಮುಕ್ತ ಜಾಗೃತಿ ಜಾಥಾ

ಶ್ರೀ ವಿಶ್ವಭಾರತಿ ಕಾಲೇಜಿನಿಂದ ಡಾ. ಬಿ.ಆರ್. ಅಂಬೇಡ್ಕರ್ ಭವನವರೆಗೂ ಡ್ರಗ್ಸ್ ವ್ಯಸನ ಮುಕ್ತ ಜಾಗೃತಿ ಜಾಥಾ ನಡೆಯಿತು. ಕಾಲೇಜು ವಿದ್ಯಾರ್ಥಿಗಳು ಡ್ರಗ್ಸ್ ನಿಂದ ಆಗುವ ಅಡ್ಡಪರಿಣಾಮಗಳ ಬಗ್ಗೆ ಭಿತ್ತಿಪತ್ರಗಳನ್ನು ಹಿಡಿದು ಜಾಗೃತಿ ಮೂಡಿಸಿದರು. ಈ ಸಂದರ್ಭದಲ್ಲಿ ವಿಶ್ವಭಾರತಿ ಕಾಲೇಜು ಪ್ರಾಂಶುಪಾಲರಾದ ಕುಮಾರಸ್ವಾಮಿ, ಪೊಲೀಸ್ ಸಹಾಯಕ ಇನ್ಸೆಕ್ಟರ್ ಗಳಾದ ಚಂದ್ರಕಾಂತ ನಾಯಕ, ಚಿಕ್ಕನಾಯಕ, ಸುರೇಶ್ ನಾಯಕ, ಸುನಿಲ್ ಗೌಡ , ಆರಕ್ಷಕ ಸಿಬ್ಬಂದಿಗಳಾದ ಸಯ್ಯದ್ ಕಬೀರ್ ಉದ್ದಿನ್, ಮಹೇಶ್, ಉಮೇಶ್, ಮೋಹನ್ , ಪ್ರಾಂಶುಪಾಲರಾದ ಅರಸು ಸೇರಿದಂತೆ ಕಾಲೇಜು ವಿದ್ಯಾರ್ಥಿಗಳು, ಇನ್ನಿತರರು ಉಪಸ್ಥಿತರಿದ್ದರು.

# ಶಿಕ್ಷಣ ಪಡೆದ ವಿದ್ಯಾರ್ಥಿಗಳ ಸಾಧನೆಯೇ ಹೆಮ್ಮೆ :ಎಸ್.ಜಿ.ನಂದಾ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಒಬ್ಬ ಶಿಕ್ಷಕನ ನಿಜವಾದ ಸಂಪತ್ತು ಕಟ್ಟಡಗಳಲ್ಲ ಅಥವಾ ಅಥವಾ ಪ್ರಶಸ್ತಿಗಳಲ್ಲ. ತನ್ನಿಂದ ಶಿಕ್ಷಣ ಪಡೆದ ವಿದ್ಯಾರ್ಥಿಗಳ ಸಾಧನೆಗಳೇ ಅವನ ದೊಡ್ಡ ಹೆಮ್ಮೆ ಎಂದು ಶಿಕ್ಷಕ ಎಸ್.ಜಿ.ನಂದಾ ಹೇಳಿದರು.

ಬಬಲೇಶ್ವರ ತಾಲ್ಲೂಕಿನ ಲಿಂಗದಳ್ಳಿಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ನಡೆದ ಗುರುವಂದನಾ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಇಂದು ನನ್ನ ಅನೇಕ ವಿದ್ಯಾರ್ಥಿಗಳು ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸ್ಥಾನಗಳನ್ನು ಅಲಂಕರಿಸಿರುವುದನ್ನು ನೋಡಿದಾಗ ಶಿಕ್ಷಕನಾಗಿ ನನಗೆ ಹೆಮ್ಮೆಯಾಗುತ್ತದೆ.

ಶಿಕ್ಷಣ ಎಂದರೆ ಕೇವಲ ಪುಸ್ತಕದ ಜ್ಞಾನವಲ್ಲ. ಉತ್ತಮ ವ್ಯಕ್ತಿತ್ವ, ಶಿಸ್ತು, ಮಾನವೀಯತೆ, ಪ್ರಾಮಾಣಿಕತೆ ಮತ್ತು ದೇಶಪ್ರೇಮವನ್ನು ಬೆಳೆಸುವುದೇ ನಿಜವಾದ ಶಿಕ್ಷಣ. ಈ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ವಿದ್ಯಾರ್ಥಿಗಳು ಉತ್ತಮ ನಾಗರಿಕರಾಗುತ್ತಾರೆ.

ಇಂದಿನ ಶಿಕ್ಷಕರು ಅತ್ಯುತ್ತಮ ರೀತಿಯಲ್ಲಿ ಶಾಲೆಯನ್ನು ಮುನ್ನಡೆಸುತ್ತಿದ್ದಾರೆ ಎಂಬುದು ಸಂತಸದ ವಿಷಯ. ಅವರಿಗೆ ನನ್ನ ಅಭಿನಂದನೆಗಳು. ಪ್ರೀತಿಯ ವಿದ್ಯಾರ್ಥಿಗಳೇ, ನಿಮ್ಮ ಶಿಕ್ಷಕರನ್ನು ಗೌರವಿಸಿ. ಅವರು ನೀಡುವ ಮಾರ್ಗದರ್ಶನವನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ. ನಿಮ್ಮ ಯಶಸ್ಸೇ ನಿಮ್ಮ ಶಿಕ್ಷಕರಿಗೆ ನೀಡುವ ಅತ್ಯುತ್ತಮ ಗೌರವ ಎಂದು ಹೇಳಿದರು.

ತಮ್ಮ ಬದುಕಿಗೆ ಭದ್ರ ಬುನಾದಿ ಹಾಕಿಕೊಟ್ಟ ಗುರುಗಳನ್ನು ಸ್ಮರಿಸುವ ಉದ್ದೇಶದಿಂದ ಹಮ್ಮಿಕೊಳ್ಳಲಾಗಿದ್ದ ಈ ಅಪರೂಪದ ಸಮಾರಂಭದಲ್ಲಿ ದೇಶದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಶಾಲೆಯ ಹಳೆಯ ವಿದ್ಯಾರ್ಥಿಗಳು ಭಾವುಕರಾಗಿ ಪಾಲ್ಗೊಂಡಿದ್ದರು. ಭಾರತೀಯ ಸೇನೆ, ಪೊಲೀಸ್ ಇಲಾಖೆ, ಕೆಎಸ್‌ಆರ್‌ಟಿಸಿ, ಕೆಪಿಟಿಸಿಎಲ್ ಸೇರಿದಂತೆ ವಿವಿಧ ಪ್ರತಿಷ್ಠಿತ ರಂಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಾವು ಇಂದು ಸಮಾಜದಲ್ಲಿ ವಿವಿಧ ಗೌರವಾನ್ವಿತ ಹುದ್ದೆಗಳಲ್ಲಿದ್ದೇವೆ ಎಂದರೆ ಅದಕ್ಕೆ ನಮ್ಮ ಪ್ರಾಥಮಿಕ ಶಾಲೆಯ ಗುರುಗಳೇ ಕಾರಣ. ಅವರ 19 ವರ್ಷಗಳ ನಿಸ್ವಾರ್ಥ ಸೇವೆಗೆ ಕೃತಜ್ಞತೆ ಸಲ್ಲಿಸುವುದು ನಮ್ಮ ಸೌಭಾಗ್ಯ ಎಂದು ಎಲ್ಲ ಹಳೆಯ ವಿದ್ಯಾರ್ಥಿಗಳು ಸ್ಮರಿಸಿದರು.19 ವರ್ಷಗಳ ಕಾಲ ಸೇವೆ ಸಲ್ಲಿಸಿದ ಗುರುಗಳಾದ ಎಸ್. ಜಿ. ನಂದಾ, ಎನ್. ಎಸ್. ಗೋಡಿಹಾಳ ಅವರನ್ನು ಸನ್ಮಾನಿಸಲಾಯಿತು. ಗೀತಾ ಬಿರಾದಾರ, ಶಂಕರ ಲಡಂಗಿ, ಸಂಗು ಮುದಗನ್ನವರ, ಹುಸೇನಪ್ಪ ಚಲವಾದಿ, ಎನ್.ಎಸ್. ಗೋಡಿಹಾಳ ಮಾತನಾಡಿದರು.



ಸಾನಿಧ್ಯ ಶ್ರೀ ವಿರೂಪಾಕ್ಷ ಹಿರೇಮಠ, ಎಸ್ಡಿಎಂಸಿ ಅಧ್ಯಕ್ಷ ಪ್ರಕಾಶ ಛಲವಾದಿ,ಗಂಗೂಬಾಯಿ ಹಿರೇಮಠ, ಗುರಪ್ಪಾ ಜಂಬಗಿ, ಈರಪ್ಪ ಚೋಳಪ್ಪಗೋಳ, ಸುಬ್ಬನಗೌಡ ಪಾಟೀಲ, ಮುತ್ತನಗೌಡ ಪಾಟೀಲ, ಚನ್ನಪ್ಪ ದೇವಾಪುರ, ಸಂಗಪ್ಪ ಜಂಬಗಿ,ಈರಪ್ಪ ಮುದಗನ್ನವರ, ಶ್ರೀಶೈಲ ಅರ್ಜುನಗಿ, ಪ್ರಶಾಂತಗೌಡ ಪಾಟೀಲ, ನಿಂಗಪ್ಪ ರೊಳ್ಳಿ,ಪುಂಡಲೀಕ ಕೋಲಕಾರ, ರಾವತಪ್ಪ ಹಳಿಜೋಳ, ಭೀಮಪ್ಪ ಜಂಬಗಿ, ರಮೇಶ್ ಜಂಬಗಿ, ಅಶೋಕಗೌಡ ಎಸ್. ಪಾಟೀಲ, ನಾಗಪ್ಪ ಛಲವಾದಿ, ಯಲಪ್ಪ ಛಲವಾದಿ, ಅರ್ಜುನ ಛಲವಾದಿ, ಗ್ರಾಮದ ಮುಖಂಡರು, ಹಳೆಯ ವಿದ್ಯಾರ್ಥಿಗಳು ಇದ್ದರು.

ಪ್ರಾರ್ಥನೆ ಕಾವೇರಿ ವಾಲಿಕಾರ, ನಿರೂಪಣೆಯನ್ನು ಹಣಮಂತ ಕಾತರಕಿ, ಸ್ವಾಗತವನ್ನು ರಾಜು ಕೋಲಕಾರ ಮತ್ತು ಮೈಬು ಹುಲಕುಂದ ನೆರವೇರಿಸಿದರು.

# ವಸತಿ ಶಾಲೆ ನಿರ್ಮಾಣಕ್ಕೆ ಮಠದ ಜಮೀನು :ಗ್ರಾಮಸ್ಥರ ವಿರೋಧ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ತಾಲ್ಲೂಕಿನ ತೆಗ್ಗಿಹಳ್ಳಿ ಗ್ರಾಮದಲ್ಲಿ ವಸತಿ ಶಾಲೆ ನಿರ್ಮಾಣಕ್ಕಾಗಿ ಮಠದ ಜಮೀನು ನೀಡಿರುವುದನ್ನು ವಿರೋಧಿಸಿ ಗ್ರಾಮಸ್ಥರು ಹಾಗೂ ಶ್ರೀ ಮಠದ ಆಡಳಿತ ಮಂಡಳಿಯವರು ಶ್ರೀಮಠದ ಅಭಿನವ ಮುರುಘೇಂದ್ರ ಶಿವಾಚಾರ್ಯರ ನೇತೃತ್ವದಲ್ಲಿ ಸರ್ಕಾರದ ವಿರುದ್ಧ ತೀವ್ರ ಆಕ್ಷೇಪ ವ್ಯಕ್ತಪಡಿಸಿ ಸೋಮವಾರ ಕ್ಷೇತ್ರ ಶಿಕ್ಷಣಾಧಿಕಾರಿ ಮೋಹನ್‌ಕುಮಾರ್ ಪಿ. ಅವರಿಗೆ ಮನವಿ ಸಲ್ಲಿಸಿದರು.

ಈ ಕುರಿತು ಸೋಮವಾರ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅಧಿಕೃತ ಮನವಿ ಪತ್ರ ಸಲ್ಲಿಸಲಾಗಿದ್ದು, ಮಠದ ಹಿಂದಿನ ಉತ್ತರಾಧಿಕಾರಿಗಳು ಅಧಿಕಾರ ದುರುಪಯೋಗಪಡಿಸಿಕೊಂಡು ಜಮೀನು ಬಿಟ್ಟುಕೊಟ್ಟಿದ್ದಾರೆ ಎಂದು ಆರೋಪಿಸಲಾಗಿದೆ.

ತೆಗ್ಗಿಹಳ್ಳಿ ಗ್ರಾಮದ ಸರ್ವೆ ನಂಬರ್ 89/1ರಲ್ಲಿರುವ ಶ್ರೀ ಶಿವಾನಂದ ಸ್ವಾಮಿಗಳ ದೇವಸ್ಥಾನದ ಮಠಕ್ಕೆ ಸೇರಿದ 5 ಎಕರೆ ಜಮೀನನ್ನು ಈ ಹಿಂದೆ ವಸತಿ ಶಾಲೆ ಸ್ಥಾಪನೆಗಾಗಿ ದಾನಪತ್ರದ ಮೂಲಕ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹೆಸರಿಗೆ ಮಾಡಿಕೊಡಲಾಗಿತ್ತು. ಆದರೆ, ಹಿಂದಿನ ಮಠದ ಮುಖ್ಯಸ್ಥರಾದ ವಿಜಯ ಮಹಾಂತೇಶ ಪ್ರಭಯ್ಯ ಕೆರಿಮಠ ಅವರು ಗ್ರಾಮಸ್ಥರ ಹಾಗೂ ಮಠದ ಆಡಳಿತ ಮಂಡಳಿಯ ಒಪ್ಪಿಗೆ ಪಡೆಯದೇ, ಯಾವುದೇ ಕರಾರು ದಾಖಲೆಗಳಿಲ್ಲದೆ ಈ ಜಮೀನನ್ನು ಸರ್ಕಾರಕ್ಕೆ ಹಸ್ತಾಂತರಿಸಿದ್ದಾರೆ ಎಂದು ಗ್ರಾಮಸ್ಥರು ದೂರಿದ್ದಾರೆ.

ಗ್ರಾಮಸ್ಥರ ಬೇಡಿಕೆ ಮತ್ತು ಪರ್ಯಾಯ ಜಾಗ: ಸರ್ಕಾರದ ಶೈಕ್ಷಣಿಕ ಯೋಜನೆಗಳಿಗೆ ಅಥವಾ ಅಭಿವೃದ್ಧಿ ಕಾರ್ಯಗಳಿಗೆ ತೊಂದರೆ ಮಾಡುವುದು ತಮ್ಮ ಉದ್ದೇಶವಲ್ಲ ಎಂದು ಸ್ಪಷ್ಟಪಡಿಸಿರುವ ಗ್ರಾಮಸ್ಥರು, ಮಠದ ಒಪ್ಪಿಗೆಯಿಲ್ಲದೆ ನೀಡಿರುವ ಸರ್ವೆ ನಂಬರ್ 89/1ರ ಜಮೀನಿನಲ್ಲಿ ಯಾವುದೇ ಸರ್ಕಾರಿ ಕಟ್ಟಡಗಳನ್ನು ನಿರ್ಮಿಸಬಾರದು ಎಂದು ಒತ್ತಾಯಿಸಿದ್ದಾರೆ.



ಇದಕ್ಕೆ ಪರ್ಯಾಯವಾಗಿ, ತೆಗ್ಗಿಹಳ್ಳಿ ಗ್ರಾಮದಲ್ಲೇ ಸರ್ಕಾರಕ್ಕೆ ಸೇರಿದ ಮತ್ತೊಂದು ಜಮೀನು (ಸರ್ವೆ ನಂಬರ್ 77) ಲಭ್ಯವಿದ್ದು, ವಸತಿ ಶಾಲೆಯನ್ನು ಅಲ್ಲಿಯೇ ನಿರ್ಮಿಸಬೇಕು ಎಂದು ಅಧಿಕಾರಿಗಳಿಗೆ ಆಗ್ರಹಿಸಿದ್ದಾರೆ.

ಈ ಕುರಿತು ತಹಸೀಲ್ದಾರ ನಾಗೇಂದ್ರ ಕೋಳಶೆಟ್ಟಿ ಅವರಿಗೂ ಮನವಿ ಸಲ್ಲಿಸಲಾಗಿದೆ. ದಾಖಲೆಗಳ ಸಲ್ಲಿಕೆ: ತಮ್ಮ ವಾದಕ್ಕೆ ಪೂರಕವಾಗಿ ಗ್ರಾಮಸ್ಥರು ಮಹತ್ವದ ದಾಖಲೆಗಳನ್ನು ಶಿಕ್ಷಣ ಇಲಾಖೆಗೆ ಒಪ್ಪಿಸಿದ್ದಾರೆ. ಈ ಮನವಿ ಪತ್ರದೊಂದಿಗೆ:1994 ರಿಂದ 2004ರ ವರೆಗಿನ ಇ.ಸಿ (ಇಅ) ಪ್ರತಿಗಳು.ಎಮ್.ಆರ್ (ಒಖ) ನಂಬರ್ 1480ರ ದಾಖಲೆಗಳು.ಕರ್ನಾಟಕ ಸರ್ಕಾರದ ವಿಶೇಷ ಭೂ-ಸ್ವಾಧೀನ ಅಧಿಕಾರಿಗಳ ಕಾಯ್ದೆ ನಿರ್ವಹಿಸಿದ ದಾಖಲೆಗಳು.ಗ್ರಾಮಸ್ಥರು ಸಹಿ ಮಾಡಿದ ಬೃಹತ್ ಮನವಿ ಪತ್ರದ ನಕಲನ್ನು ಲಗತ್ತಿಸಲಾಗಿದೆ.ಗ್ರಾಮಸ್ಥರ ಮತ್ತು ಮಠದ ಆಡಳಿತ ಮಂಡಳಿಯ ಒಪ್ಪಿಗೆಯಿಲ್ಲದೆ ಈ ಜಾಗದಲ್ಲಿ ಕಾಮಗಾರಿ ಮುಂದುವರಿಸಿದರೆ ಉಂಟಾಗುವ ಕಾನೂನು ತೊಡಕುಗಳಿಗೆ ಸರ್ಕಾರವೇ ನೇರ ಹೊಣೆಯಾಗಬೇಕಾಗುತ್ತದೆ ಎಂದು ಪತ್ರದಲ್ಲಿ ಎಚ್ಚರಿಸಲಾಗಿದೆ. ಗ್ರಾಮಸ್ಥರಾದ ಸಂಜಯ ಪಾಟೀಲ, ಶ್ರೀಶೈಲ ಕುಂಬಾರ, ದಾದಾಗೌಡ ಬಿರಾದಾರ, ಸಂದೀಪ ಬಿರಾದಾರ, ಕೆ.ಆರ್. ಹಿರೇಪೂಜಾರಿ, ಶೇಖರ ಹೊಸಮನಿ, ಸಿ.ಎಸ್. ಬೇವಿನಕಟ್ಟಿ, ಶೇಖರ್ ಕಡಣಿ, ಬಾಬು ಹಿರೇಪೂಜಾರಿ, ರವಿ ಜಮಾದಾರ, ಸೈಯದ್ ಮಂದೇವಾಲಿ, ರಾಮಶೇಕ್ ತಳವಾರ ಸೇರಿದಂತೆ ಗ್ರಾಮಸ್ಥರು ಇದ್ದರು.

# ಆಪರೇಷನ್ ರೈಸ್, ಬೇಡ ಬ್ರೋ ಅಭಿಯಾನಕ್ಕೆ ಚಾಲನೆ

ಕಲಬುರಗಿ:ಕಲಬುರಗಿ ನಗರ ಮತ್ತು ಕಲಬುರಗಿ ಜಿಲ್ಲಾ ಪೊಲೀಸ ವತಿಯಿಂದ "ಬೇಡ ಬ್ರೋ ಮತ್ತು ರೈಸ್ " ಅಭಿಯಾನಕ್ಕೆ ಇಂದು ಚಾಲನೆ ನೀಡಲಾಯಿತು.

ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಇಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ., ಡಿಸಿಪಿಗಳಾದ ಶಾಲೂ, ಪ್ರವೀಣ್ ನಾಯಕ್, ಎಸ್.ಪಿ.ಅಡ್ಡೂರು ಶ್ರೀನಿವಾಸಲು ಅವರು ಪೋಸ್ಟರ್ ಬಿಡುಗಡೆ ಮಾಡುವುದರ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

30-06-2026 ರಂದು ರಾಜ್ಯಾದ್ಯಾಂತ ಅಂತರಾಷ್ಟ್ರೀಯ ಮಾದಕ ವಸ್ತುಗಳ ದುರುಪಯೋಗ ಮತ್ತು ಅಕ್ರಮ ಸಾಗಾಣೆ ವಿರೋಧಿ ದಿನವನ್ನು ಆಚರಿಸಲಾಗಿದ್ದು ಈ ರಾಜ್ಯ ಮಟ್ಟದ ಕಾರ್ಯಕ್ರಮದಲ್ಲಿ ಮುಖ್ಯ ಮಂತ್ರಿಗಳು ಹಾಗೂ ಮಾನ್ಯ ಗೃಹ ಮಂತ್ರಿಗಳು ಕ್ಯಾಂಪನ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದಾರೆ. ಅದರನ್ವಯ ಮಾದಕ ವಸ್ತುಗಳ ಸೇವನೆ, ಸಾಗಣೆ ಹಾಗೂ ಮಾರಾಟವನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಜಾರಿಗೆ ತಂದಿರುವ "ಬೇಡ ಬೋ " ಮತ್ತು "ರೈಸ್" ಕಲಬುರಗಿ ನಗರ ಹಾಗೂ ಜಿಲ್ಲೆಯಾದ್ಯಂತ ಜಾರಿಗೊಳಿಸಲಾಗುತ್ತಿದೆ ಎಂದು ಎಸ್.ಪಿ.ಅಡ್ಡೂರು ಶ್ರೀನಿವಾಸಲು, ನಗರ ಪೊಲೀಸ್ ಆಯುಕ್ತರಾದ ಡಾ.ಶರಣಪ್ಪ ಎಸ್.ಡಿ.ತಿಳಿಸಿದರು.

ಮಾದಕ ವಸ್ತುಗಳ ಸೇವನೆಯಿಂದ ಮಾನಸಿಕ ಆರೋಗ್ಯ, ಕುಟುಂಬ ಸಂಬಂಧಗಳು, ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆ. ವೃತ್ತಿ ಜೀವನ ಹಾಗೂ ಆತ್ಮಹತ್ಯೆಯಂತಹ ಗಂಭೀರ ಸಮಸ್ಯೆಗಳು ಎದುರಾಗುತ್ತಿವೆ. ಡ್ರಗ್ಸ್ ಸೇವನೆಯಿಂದ ಹಲವಾರು ಜನ ಸಾವನಪ್ಪುತ್ತಿರುವ ಘಟನೆಗಳು ಬೆಳಕಿಗೆ ಬರುತ್ತಿವೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ರಾಜ್ಯಾದ್ಯಾಂತ ಜಾರಿಗೆ ತಂದಿರುವ "ನೋ ಬ್ರೋ" ಮತ್ತು "ರೈಸ್" ಅಭಿಯಾನದ ಮೂಲಕ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

"ಬೇಡ ಬ್ರೋ" ಅಭಿಯಾನದ ಉದ್ದೇಶ

ರಾತ್ರಿ ನಿದ್ದೆ ಮಾಡದೆ ಓದುವದು, ಪ್ರೇಮ ವೈಫಲ್ಯ, ಸ್ನೇಹಿತರ ಒತ್ತಡ ಸೇರಿದಂತೆ ವಿವಿಧ ಕಾರಣಗಳಿಂದ ಡ್ರಗ್ಸ್ ಸೇವನೆಗೆ ಮುಂದಾಗಬಾರದು ಎಂಬ ಕಾರಣಕ್ಕೆ 'ಬೇಡ ಬ್ರೋ" ಅಭಿಯಾನದ ಮೂಲಕ ಜಾಗೃತಿ ನೀಡಲಾಗುತ್ತಿದೆ.

# ಸಹಕಾರ ಸಂಘಗಳು ಉತ್ತಮ ಸೇವೆಯಿಂದ ಅಭಿವೃದ್ಧಿ ಸಾಧಿಸಬೇಕು



■ ಉದಯರಶ್ಮಿ ದಿನಪತ್ರಿಕೆ

**ವಿಜಯಪುರದಲ್ಲಿ ಸೌಹಾರ್ದ ಸಹಕಾರ ಸಂಘಗಳ ಸಂಪರ್ಕ ಸಭೆಯಲ್ಲಿ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತದ ಅಧ್ಯಕ್ಷ ಜಿ.ನಂಜಣಗೌಡ ಕರೆ**

ವಿಜಯಪುರ: ಸೌಹಾರ್ದ ಸಹಕಾರ ಸಂಘಗಳು ಸೌಹಾರ್ದ ಕಾಯ್ದೆಯ ಚೌಕಟ್ಟಿನೊಳಗೆ ಕಾರ್ಯನಿರ್ವಹಿಸುತ್ತಾ ಸದಸ್ಯರಿಗೆ ಉತ್ತಮ ಸೇವೆ ಒದಗಿಸಿ ಸಂಘಗಳ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತದ ಅಧ್ಯಕ್ಷ ಜಿ. ನಂಜಣಗೌಡ ಕರೆ ನೀಡಿದರು.

ನಗರದಲ್ಲಿ ಜಿಲ್ಲೆಯ ಸೌಹಾರ್ದ ಸಹಕಾರ ಸಂಘಗಳಿಗಾಗಿ ಆಯೋಜಿಸಲಾಗಿದ್ದ "ಸೌಹಾರ್ದ ಸಹಕಾರ ಸಂಘಗಳ ಸಂಪರ್ಕ ಸಭೆ" ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ನಂಜಣಗೌಡ ಮಾತನಾಡಿ, "ಸಹಕಾರ ಸಂಘದ ಪದಾಧಿಕಾರಿಗಳು ಅತ್ಯಂತ ಜವಾಬ್ದಾರಿಯುತ ಸ್ಥಾನದಲ್ಲಿರುತ್ತಾರೆ. ಸಂಘದಿಂದ ನೀಡಲಾದ ಸಾಲಗಳು ಸಕಾಲದಲ್ಲಿ ಮರುಪಾವತಿಯಾಗದಿದ್ದರೆ ಕಾನೂನಿನ ಪ್ರಕಾರ ನಿರ್ದೇಶಕ ಮಂಡಳಿಯ ಜವಾಬ್ದಾರಿ ನಿಶ್ಚಿತವಾಗುತ್ತದೆ.

ಆದ್ದರಿಂದ ಪಾರದರ್ಶಕ ಆಡಳಿತ, ಆರ್ಥಿಕ ಶಿಸ್ತು ಹಾಗೂ ಸದಸ್ಯರಿಗೆ ಗುಣಮಟ್ಟದ ಸೇವೆ ನೀಡುವುದು ಅತ್ಯಗತ್ಯ" ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸೌಹಾರ್ದ ಸಂಯುಕ್ತ ಸಹಕಾರಿ ಸಂಸ್ಥೆಯ ನಿರ್ದೇಶಕ ಸಂಜಯ್ ಬಿ. ಪಾಟೀಲ ಮಾತನಾಡಿ, ಜಿಲ್ಲೆಯ ಎಲ್ಲಾ ಸೌಹಾರ್ದ ಸಹಕಾರ ಸಂಘಗಳ ಜವಾಬ್ದಾರಿ ಹೆಚ್ಚಾಗಿದ್ದು, ಪರಸ್ಪರ ಸಹಕಾರದ ಮನೋಭಾವದಿಂದ ಕಾರ್ಯನಿರ್ವಹಿಸುವ ಮೂಲಕ ಸಹಕಾರ ಚಳವಳಿಯನ್ನು ಇನ್ನಷ್ಟು ಬಲಪಡಿಸಬೇಕೆಂದು ಕರೆ ನೀಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕರ್ನಾಟಕ ಸರ್ಕಾರದ ಮಾಜಿ ಸಚಿವ ಹಾಗೂ ಶ್ರೀ ಸೌಹಾರ್ದ ಸಹಕಾರಿ ಸಂಸ್ಥೆ, ವಿಜಯಪುರ ಅಧ್ಯಕ್ಷ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಅವರು, ಸಾಲ ವಿತರಣೆ ಮತ್ತು ವಸೂಲಾತಿ ಪ್ರಕ್ರಿಯೆಯಲ್ಲಿ ಹೆಚ್ಚಿನ ಎಚ್ಚರಿಕೆ ವಹಿಸಿದರೆ ಸಹಕಾರ ಸಂಘಗಳು ಉತ್ತಮ ಅಭಿವೃದ್ಧಿ ಸಾಧಿಸಬಹುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಸಂಸ್ಥೆಯ ಮಾಜಿ ನಿರ್ದೇಶಕ ಹಾಗೂ ಹಾಲಿ ನಿರ್ದೇಶಕ ಸುಭಾಷ್ ಇಂಡಿ ಅವರು ಸಹ ಮಾರ್ಗದರ್ಶನ ನೀಡಿದರು.

ಪ್ರಸ್ತಾವಿಕೆಯನ್ನು ಪ್ರಾದೇಶಿಕ ಅಧಿಕಾರಿ ಬಸವರಾಜ ಹೊಂಗಳ ಅವರು ಮಂಡಿಸಿದರು.

ಪ್ರತಿಭಾ ಮಠ ಅವರು ನಿರೂಪಿಸಿ ವಂದಿಸಿದರು. ಸೌಹಾರ್ದ ಅಭಿವೃದ್ಧಿ ಅಧಿಕಾರಿ ಬಸವರಾಜ ಎಸ್. ಅವರು ಸ್ವಾಗತಿಸಿದರು.

ಸಭೆಯಲ್ಲಿ ಹಿರಿಯ ಸಹಕಾರಿಗಳಾದ ಅರುಣ ವಾರದ, ಪರಶುರಾಮ ಚಿಂಚಲಿ, ದೀಪಕ್ ಶಿಂತ್ರೆ, ಸಿದ್ದು ಮಲ್ಲಿಕಾರ್ಜುನಮಠ, ಯಮನಪ್ಪ ಸಾತಿಹಾಳ, ಚಡಚಣದ ಚಂದ್ರಶೇಖರ ಪಾಟೀಲ, ತಾಳಿಕೋಟೆಯ ರಾಜು ಹಂಚಾಟೆ, ಸಿಂದಗಿಯ ಆರ್. ಡಿ. ಕುಲಕರ್ಣಿ, ವಿವೇಕಾನಂದ ಶಿರೋಳ್ಕರ್, ಇಂಡಿಯ ಬಿ. ಎಸ್. ಪಾಟೀಲ ಸೇರಿದಂತೆ ಜಿಲ್ಲೆಯ ವಿವಿಧ ಸೌಹಾರ್ದ ಸಹಕಾರ ಸಂಘಗಳ ಪ್ರತಿನಿಧಿಗಳು ಸೇರಿದಂತೆ ಅನೇಕರಿದ್ದರು.

# ಆಲಮಟ್ಟಿ ಎತ್ತರ ಹೆಚ್ಚಳ 3 ವರ್ಷದಲ್ಲಿ ಪೂರ್ಣಗೊಳಿಸಲು ಬದ್ಧ



■ ಉದಯರಶ್ಮಿ ದಿನಪತ್ರಿಕೆ

**80 ಸಾವಿರ ಕೋಟಿ ರೂ. ಅಗತ್ಯ । 1.33 ಲಕ್ಷ ಎಕರೆ ಭೂಸ್ವಾಧೀನ । ಸಚಿವ ರಾಮಲಿಂಗಾರೆಡ್ಡಿ ಹೇಳಿಕೆ**

ಆಲಮಟ್ಟಿ: ಆಲಮಟ್ಟಿ ಜಲಾಶಯದ ಎತ್ತರವನ್ನು 519.60 ಮೀಟರ್‌ನಿಂದ 524.256 ಮೀಟರ್‌ಗೆ ಹೆಚ್ಚಿಸಲು ಭೂಸ್ವಾಧೀನ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಸುಮಾರು 80 ಸಾವಿರ ಕೋಟಿ ಅಗತ್ಯವಿದೆ. ಇದಕ್ಕಾಗಿ 1.33 ಲಕ್ಷ ಎಕರೆ ಜಮೀನು ವಶಪಡಿಸಿಕೊಳ್ಳಬೇಕಿದೆ. ಮುಂದಿನ ಮೂರು ವರ್ಷಗಳಲ್ಲಿ ಭೂಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸರ್ಕಾರ ಬದ್ಧವಾಗಿದೆ ಎಂದು ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

ಜಲಸಂಪನ್ಮೂಲ ಸಚಿವರಾದ ನಂತರ ಮಂಗಳವಾರ ಪ್ರಥಮ ಬಾರಿಗೆ ಆಲಮಟ್ಟಿಗೆ ಭೇಟಿ ನೀಡಿದ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

"ಈ ವರ್ಷ ಸರ್ಕಾರ □3,000 ಕೋಟಿ ಅನುದಾನ ಒದಗಿಸಿದೆ. ಇದು ಸಾಂಕೇತಿಕ ಅನುದಾನವಾಗಿದೆ. ಪೂರಕ ಬಜೆಟ್‌ನಲ್ಲಿ ಹೆಚ್ಚಿನ ಅನುದಾನ ಒದಗಿಸುವಂತೆ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಲಾಗಿದೆ" ಎಂದರು.

ಕೃಷ್ಣಾ ನೀರು ವಿವಾದ

ಕೃಷಾ ನದಿ ನೀರಿನ ಹಂಚಿಕೆ ವಿಚಾರದಲ್ಲಿ ಮಹಾರಾಷ್ಟ್ರ ತೆಲಂಗಾಣ ಹಾಗೂ ಆಂಧ್ರಪ್ರದೇಶ ರಾಜ್ಯಗಳ ನಡುವೆ ಇರುವ ವಿವಾದಗಳನ್ನು ಸೌಹಾರ್ದಯುತವಾಗಿ ಬಗೆಹರಿಸಲು ರಾಜ್ಯ ಸರ್ಕಾರ ಸಿದ್ಧವಿದೆ. ಕೇಂದ್ರ ಜಲಶಕ್ತಿ ಸಚಿವರು ಸಂಬಂಧಪಟ್ಟ ರಾಜ್ಯಗಳ ಸಭೆ ಕರೆಯಬೇಕು ಎಂದು ಒತ್ತಾಯಿಸಿದರು.

ಕೃಷಾ ನ್ಯಾಯಾಧೀಕರಣದ ತೀರ್ಪಿನ ಗೆಜೆಟ್ ಅಧಿಸೂಚನೆ ಶೀಘ್ರ ಹೊರಡಿಸಲು ಸುಪ್ರೀಂ ಕೋರ್ಟ್‌ನಲ್ಲಿ ಕಾನೂನು ಹೋರಾಟ ಮುಂದುವರಿದಿದೆ. ಮುಖ್ಯಮಂತ್ರಿಯವರೊಂದಿಗೆ ಕೇಂದ್ರ ಜಲಶಕ್ತಿ ಸಚಿವರನ್ನು ಭೇಟಿ ಮಾಡಿ ಈ ಕುರಿತು ಮತ್ತೊಮ್ಮೆ ಮನವಿ ಮಾಡಲಾಗುವುದು ಎಂದು ಹೇಳಿದರು.

**ಇತರೆ ವಿಚಾರಗಳು**

ಯುಕೆಪಿ ಗುತ್ತಿಗೆದಾರರ ಬಾಕಿ ಬಿಲ್ ಪಾವತಿಯಲ್ಲಿ ವಿಳಂಬವಾಗಿದೆ. ಇದಕ್ಕೆ ಹಿಂದಿನ ಬಿಜೆಪಿ ಸರ್ಕಾರ ಮತ್ತು ಈಗಿನ ಕಾಂಗ್ರೆಸ್ ಸರ್ಕಾರ ಎರಡೂ ಕಾರಣವಾಗಿವೆ. ಗುತ್ತಿಗೆದಾರರ ಬಾಕಿ ಬಿಲ್‌ಗಳನ್ನು ಜೇಷ್ಠತೆಯ ಆಧಾರದ ಮೇಲೆ ಪಾವತಿಸಲಾಗುವುದು.

ಆಲಮಟ್ಟಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಹಲವು ಪ್ರಸ್ತಾವನೆಗಳು ಬಂದಿದ್ದು, ಅದಕ್ಕೆ ಆದ್ಯತೆ ನೀಡಲಾಗುವುದು.

ಮುಂಗಾರು ಹಂಗಾಮು


ಯುಕೆಪಿ ಅಚ್ಚುಕಟ್ಟು ಪ್ರದೇಶದ ಮುಂಗಾರು ಹಂಗಾಮಿಗೆ ನೀರು ಹರಿಸಲು 60 ಟಿಎಂಸಿ ಅಡಿ ನೀರು ಅಗತ್ಯವಿದೆ. ಇನ್ನೂ 20 ಟಿಎಂಸಿ ನೀರು ಬಂದರೆ ಮುಂಗಾರು ಹಂಗಾಮಿನಲ್ಲಿ ನೀರಾವರಿಗೆ ನೀರು ಹರಿಸುವ ಬಗ್ಗೆ ಚಿಂತಿಸಲಾಗುವುದು. ಸದ್ಯಕ್ಕೆ ಕುಡಿಯುವ ನೀರಿಗಾಗಿ ಮಾತ್ರ ಕಾಲುವೆಗೆ ನೀರು ಬಿಡಲಾಗಿದೆ ಎಂದು ತಿಳಿಸಿದರು.

ಜುಲೈ 25ರೊಳಗೆ ರಾಜ್ಯ ಸಚಿವ ಸಂಪುಟ ವಿಸ್ತರಣೆ ಪೂರ್ಣಗೊಳ್ಳುವ ವಿಶ್ವಾಸವಿದೆ ಎಂದು ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಶಾಸಕರಾದ ಜೆ.ಟಿ. ಪಾಟೀಲ, ಉಮೇಶ ಮೇಟಿ, ಸಿ.ಎಸ್. ನಾಡಗೌಡ, ಮುಖಂಡರಾದ ನಾಗರಾಜ ಹದ್ಲಿ, ಶ್ರೀಕರ ದೇಸಾಯಿ, ರಾಯಪ್ಪ ಮೇಟಿ ಇದ್ದರು.

# ಕೋಹಳ್ಳಿ ಸಹಕಾರ ಸಂಘಕ್ಕೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ



ಅಥಣಿ: ತಾಲೂಕಿನ ಕೋಹಳ್ಳಿ ಗ್ರಾಮದ ಶ್ರೀ ಸಂಗಮೇಶ್ವರ ವಿವಿಧೋದ್ದೇಶಗಳ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಶೌಕತಲಿ ಇಸ್ಮಾಯಿಲ್ ಡೊಂಗರಗಾಂವ ಹಾಗೂ ಉಪಾಧ್ಯಕ್ಷರಾಗಿ ಶಿವನವ್ವ ವಿಠಲ ಡಂಬಳಿ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಂಘದ ಕಚೇರಿಯಲ್ಲಿ ನಡೆದ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆಯಲ್ಲಿ ಒಟ್ಟು 12 ನಿರ್ದೇಶಕರ ಪೈಕಿ 7 ನಿರ್ದೇಶಕರು ನೂತನ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಅಭ್ಯರ್ಥಿಗಳಿಗೆ ಬೆಂಬಲ ಸೂಚಿಸಿದ ಹಿನ್ನೆಲೆಯಲ್ಲಿ ಇಬ್ಬರೂ ಅವಿರೋಧವಾಗಿ ಆಯ್ಕೆಯಾದರು.

ನೂತನ ಅಧ್ಯಕ್ಷ ಹಾಗೂ ಉಪಾಧ್ಯಕ್ಷರು ಸೇರಿದಂತೆ ನಿರ್ದೇಶಕರ ಮಂಡಳಿಯ ಸದಸ್ಯರು ಮಾಜಿ ಉಪಮುಖ್ಯಮಂತ್ರಿ ಹಾಗೂ ಅಥಣಿ ಶಾಸಕ ಲಕ್ಷ್ಮಣ ಸವದಿ ಅವರ ನಿವಾಸಕ್ಕೆ ಭೇಟಿ ನೀಡಿ, ಮಾರ್ಗದರ್ಶನ ಮತ್ತು ಸಹಕಾರಕ್ಕಾಗಿ ಅಭಿನಂದನೆ ಸಲ್ಲಿಸಿ ಸತ್ಕರಿಸಿದರು.

ನೂತನ ಅಧ್ಯಕ್ಷ ಶೌಕತಲಿ ಇಸ್ಮಾಯಿಲ್ ಡೊಂಗರಗಾಂವ ಅವರು ಮಾತನಾಡಿ, "ಸಂಘದ ಅಭಿವೃದ್ಧಿಗೆ ಎಲ್ಲ ನಿರ್ದೇಶಕರು ಮತ್ತು ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪಾರದರ್ಶಕ ಆಡಳಿತ ನೀಡುತ್ತೇವೆ. ರೈತರಿಗೆ ಅಗತ್ಯವಿರುವ ಸಾಲ, ಕೃಷಿ ಸಂಬಂಧಿತ ಸೌಲಭ್ಯಗಳು ಹಾಗೂ ಸರ್ಕಾರದ ಯೋಜನೆಗಳು ಸಮಯಕ್ಕೆ ತಲುಪುವಂತೆ ಶ್ರಮಿಸುತ್ತೇವೆ. ಸಂಘವನ್ನು ಆರ್ಥಿಕವಾಗಿ ಇನ್ನಷ್ಟು ಸದೃಢಗೊಳಿಸಿ, ಸದಸ್ಯರ ಹಿತಾಸಕ್ತಿಗೆ ಆದ್ಯತೆ ನೀಡುವ ಮೂಲಕ ಎಲ್ಲರ ಸಹಕಾರದೊಂದಿಗೆ ಮಾದರಿ ಸಹಕಾರ ಸಂಘವನ್ನಾಗಿ ರೂಪಿಸುವುದು ನಮ್ಮ ಗುರಿಯಾಗಿದೆ," ಎಂದು ಹೇಳಿದರು.

ಈ ವೇಳೆ ನೂರಅಹಮ್ಮದ ಡೊಂಗರಗಾಂವ, ಡಾ. ಆಸಿಫಲಿ ಡೊಂಗರಗಾಂವ, ಡಾ. ತಾಜುದ್ದೀನ್ ಡೊಂಗರಗಾಂವ, ಅಜರುದ್ದೀನ್ ಡೊಂಗರಗಾಂವ, ಆದಿಲ್ ಡೊಂಗರಗಾಂವ, ಸೇರಿದಂತೆ ಸಂಘದ

ನಿರ್ದೇಶಕರಾದ ರೇವಣ್ಣಸಿದ್ದ ಸತ್ತಿ, ಸುವರ್ಣಾ ಝುರೆ, ಸುರೇಶ ಬಿಳಗುಂಡಿ, ರಾಮು ತಳವಾರ,ಸದಾಶಿವಸರಗರ, ಸದಾಶಿವ ಹರಪಾಳೆ, ಶ್ರೀಕಾಂತ ಆಲಗೂರ, ಸಹದೇವ ಸೂರ್ಯವಂಶಿ, ತುಕಾರಾಮ ಫಡತಾರೆ, ಸಿಕಂದರ ಮುಜಾವರ, ಕೇದಾರಿ ವಳಸಂಗ, ದಿಲೀಪ ಮರಗಾಳೆ, ಹಣಮಂತ ಬಜಂತ್ರಿ, ಶಿವಗೌಡ ಮುಧೋಳ, ಸುರೇಶ ಅವತಾಡೆ, ಸೈಬಣ್ಣ ಪೂಜಾರಿ, ಬಂದುಸಾಬ ಮುಜಾವರ, ನಿಂಗಪ್ಪ ಮಿರ್ಜಿ, ಬದ್ರುದ್ದೀನ್ ಡೊಂಗರಗಾಂವ, ಬೈಜು ಮರಗಾಳೆ, ವಿಠಲ ಸರಗರ, ವಿನೋದ ಗುರಪ್ಪಗೋಳ, ಅಶೋಕ ತಳಕೇರಿ, ಪ್ರಕಾಶ ಕನ್ನಾಳ, ಶಂಕರ ಗುರಪ್ಪಗೋಳ, ಪುರಂದರ ನಾಟೀಕಾರ, ಮಹಾದೇ ವ ಸತ್ತಿ, ಅಶೋಕ ಗುರಪ್ಪಗೋಳ, ಭೀಮಣ್ಣ ಕಂಕಣವಾಡಿ ಸೇರಿ ಹಲವರುಹಾಜರಿದ್ದರು.

# ಸನಾ ಕಾಲೇಜಿನ 8 ವಿದ್ಯಾರ್ಥಿಗಳಿಗೆ ಎಂಬಿಬಿಎಸ್ ಪ್ರವೇಶ : ಸನ್ಮಾನ

■ ಉದಯರಶ್ಮಿ ದಿನಪತ್ರಿಕೆ



ಅಥಣಿ: ತಾಲೂಕಿನ ಸನಾ ಪಿಯು ಕಾಲೇಜಿನ 2026–27ನೇ ಶೈಕ್ಷಣಿಕ ವರ್ಷದ ಒಟ್ಟು 8 ವಿದ್ಯಾರ್ಥಿಗಳು ನೀಟ್ ಪರೀಕ್ಷೆಯಲ್ಲಿ ಉತ್ಕೃಷ್ಟ ಅಂಕಗಳನ್ನು ಪಡೆದು ಎಂಬಿಬಿಎಸ್ ವೈದ್ಯಕೀಯ ಕೋರ್ಸ್‌ಗೆ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ, ಅಥಣಿ ಅಂಜುಮನ್–ಎ–ಇಸ್ಲಾಂ ಸಮಿತಿ ಹಾಗೂ ಮುಸ್ಲಿಂ ಸಮಾಜದ ಮುಖಂಡರು ಯಶಸ್ವಿ ವಿದ್ಯಾರ್ಥಿಗಳನ್ನು ಸತ್ಕರಿಸಿ ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಮುಸ್ಲಿಂ ಮುಖಂಡ ಇನ್ನೂಸ್ ಮುಲ್ಲಾ, "ಕೇವಲ ಕೋಚಿಂಗ್ ತರಗತಿಗಳಾಗಿ ಆರಂಭಗೊಂಡ ಸನಾ ಸಂಸ್ಥೆ, ಇಂದು ಪಿಯು ಕಾಲೇಜಾಗಿ ಅಲ್ಪಾವಧಿಯಲ್ಲೇ ಶಿಕ್ಷಣ ಕ್ಷೇತ್ರದಲ್ಲಿ ತನ್ನದೇ ಆದ ಗುರುತನ್ನು ಮೂಡಿಸಿರುವುದು ಹೆಮ್ಮೆಯ ಸಂಗತಿ. ಸಂಸ್ಥೆಯ ಅಧ್ಯಕ್ಷ ಖಲೀಲ ಬಾಗವಾನ ಹಾಗೂ ಶಿಕ್ಷಕರ ಪರಿಶ್ರಮದ ಫಲವಾಗಿ ಇಂದು ಈ ಸಾಧನೆ ಸಾಧ್ಯವಾಗಿದೆ. ಪ್ರತಿಯೊಬ್ಬ ಪಾಲಕರ ಕನಸು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಉಜ್ವಲ ಭವಿಷ್ಯ ರೂಪಿಸುವುದಾಗಿದೆ. ಆ ನಿಟ್ಟಿನಲ್ಲಿ ಸನಾ ಕಾಲೇಜು ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ವಿದ್ಯಾರ್ಥಿಗಳು ವೈದ್ಯಕೀಯ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್‌ಗಳಿಗೆ ಆಯ್ಕೆಯಾಗಲಿ," ಎಂದು ಹಾರೈಸಿದರು.

ಸಂಸ್ಥೆಯ ಅಧ್ಯಕ್ಷ ಖಲೀಲ ಬಾಗವಾನ ಮಾತನಾಡಿ, "ನಮ್ಮ ಸಂಸ್ಥೆಯಲ್ಲಿ ಕಲಿತ 8 ವಿದ್ಯಾರ್ಥಿಗಳು ನೀಟ್ ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಪಡೆದು ಎಂಬಿಬಿಎಸ್‌ಗೆ ಆಯ್ಕೆಯಾಗಿರುವುದು ಸಂಸ್ಥೆಗೆ ಹಾಗೂ ಅವರ ಪಾಲಕರಿಗೆ ಹೆಮ್ಮೆಯ ವಿಷಯವಾಗಿದೆ. ಶಿಕ್ಷಕರು ಎಷ್ಟೇ ಉತ್ತಮವಾಗಿ ಬೋಧಿಸಿದರೂ, ವಿದ್ಯಾರ್ಥಿಗಳ ಪರಿಶ್ರಮ ಮತ್ತು ಆಸಕ್ತಿ ಇದ್ದಾಗ ಮಾತ್ರ ಯಶಸ್ಸು ಸಾಧ್ಯ. ಈ ವರ್ಷದ ಫಲಿತಾಂಶ ನಮ್ಮೆಲ್ಲರ ಶ್ರಮದ ಪ್ರತಿಫಲವಾಗಿದೆ. ಮುಂದಿನ ವರ್ಷಗಳಲ್ಲಿ ಇನ್ನಷ್ಟು ವಿದ್ಯಾರ್ಥಿಗಳನ್ನು ಅತ್ಯುತ್ತಮ ಸಾಧನೆಗೈಯುವಂತೆ ತಯಾರು ಮಾಡುವ ಗುರಿ ಹೊಂದಿದ್ದೇವೆ. ಈ ಯಶಸ್ಸಿಗೆ ಶಾಲೆಯ ಸಿಬ್ಬಂದಿ, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಪಾಲಕರ ಸಹಕಾರವೇ ಪ್ರಮುಖ ಕಾರಣ," ಎಂದು ಹೇಳಿದರು.

ನಂತರ ಯಶಸ್ವಿ ವಿದ್ಯಾರ್ಥಿಗಳು ಹಾಗೂ ಅವರ ಪಾಲಕರು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡು , ಸತ್ಕಾರಕ್ಕಾಗಿ ಅಂಜುಮನ್–ಎ–ಇಸ್ಲಾಂ ಸಮಿತಿ ಮತ್ತು ಸಮಾಜದ ಮುಖಂಡರಿಗೆ ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಂಜುಮನ್–ಎ–ಇಸ್ಲಾಂ ಸಮಿತಿಯ ಅಧ್ಯಕ್ಷ ಸಯ್ಯದ ಅಮೀನ್ ಗದ್ಯಾಳ, ಮುಸ್ಲಿಂ ಸಮಾಜದ ಮುಖಂಡರಾದ ಇನ್ನೂಸ್ ಮುಲ್ಲಾ, ಇಲಿಯಾಸ್ ಹಿಪ್ಪರಗಿ, ಅಬ್ದುಲ್ ಅಜೀಜ್ ಮುಲ್ಲಾ, ಹಾಜಿ ಶಫೀಕ್ ಮುಲ್ಲಾ, ಹಾಜಿ ರಿಯಾಜ ಮುಲ್ಲಾ, ಇಮ್ರಾಣ ಪಟಾಯತ, ಅಬೂಬಕರ್ ಕೊಕಟನೂರ, ಡಾ. ಇಸ್ಮಾಯಿಲ್ ಮೊಮಿನ್, ಇರ್ಷಾದ್ ಮನಗೂಳಿ, ನಿಸಾರ್ ಶೇಖ್, ಅಜಹರ್ ಮುಲ್ಲಾ (ಸರ್), ದಾದಾಪೀರ ಜಮಾದಾರ್, ಸಲೀಂ ಮುಲ್ಲಾ, ಸಾಬಿರ್ ಮುಲ್ಲಾ ಸೇರಿದಂತೆ ಶಿಕ್ಷಕ ವೃಂದದವರಾದ ಪ್ರಕಾಶ ಲಗಳಿ, ಗಾಯತ್ರಿ ಕಿವಡಿ, ಜುಬೇರ ಮೋಮಿನ, ಸುಧಾಕರ ತೆಲಗಡೆ ಉಪಸ್ಥಿತರಿದ್ದರು.

# ಇಂಡಿ ತಾಲೂಕು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಲು ಆಗ್ರಹ

## ಸಂಕಷ್ಟದಲ್ಲಿರುವ ರೈತರಿಗೆ ತಕ್ಷಣವೇ ಬೆಳೆ ಪರಿಹಾರ ವಿತರಿಸಲು ಬಿಜೆಪಿ ಮುಖಂಡರ ಒತ್ತಾಯ

■ ಉದಯರಶ್ಮಿ ದಿನಪತ್ರಿಕೆ




ಇಂಡಿ: ತಾಲೂಕನ್ನು ತಕ್ಷಣವೇ ಬರಗಾಲ ಪೀಡಿತ ಪ್ರದೇಶ ಎಂದು ಘೋಷಿಸಬೇಕು ಮತ್ತು ರೈತರ ವಿವಿಧ ಜ್ವಲಂತ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಆಗ್ರಹಿಸಿ ಬಿಜೆಪಿ ಮುಖಂಡರು ಸೋಮವಾರ ಬಿಜೆಪಿ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಸರ್ಕಾರದ ವಿರುದ್ಧ ಹರಿಹಾಯ್ದರು.

ಬಿಜೆಪಿ ಮಂಡಲ ಅಧ್ಯಕ್ಷ ಹಣಮಂತ್ರಾಯಗೌಡ ಪಾಟೀಲ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಎಸ್.ಎ. ಪಾಟೀಲ ಮಾತನಾಡಿ, ತಾಲೂಕಿನ ಅಭಿವೃದ್ಧಿಗೆ ವೇಗ ನೀಡದಿದ್ದರೆ ಮುಂಬರುವ ದಿನಗಳಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

ಇಂಡಿ ತಾಲೂಕಿನಲ್ಲಿ ತೀವ್ರ ಬರಗಾಲ ಆವರಿಸಿದ್ದು, ಸರ್ಕಾರ ತಕ್ಷಣವೇ ತಾಲೂಕನ್ನು ಬರಗಾಲ ಪೀಡಿತ ಪ್ರದೇಶ ಎಂದು ಘೋಷಿಸಬೇಕು. ಸಂಕಷ್ಟದಲ್ಲಿರುವ ರೈತರಿಗೆ ತಕ್ಷಣವೇ ಬೆಳೆ ಪರಿಹಾರ ವಿತರಿಸಬೇಕು ಹಾಗೂ ತಾಲೂಕಿನ ಸಮಗ್ರ ಅಭಿವೃದ್ಧಿಗಾಗಿ ಸರ್ಕಾರ ವಿಶೇಷ ಪ್ಯಾಕೇಜ್ ಪ್ರಕಟಿಸಬೇಕು. ಇಂಡಿ ತಾಲೂಕು ನಿಂಬೆ ಬೆಳೆಗೆ ಜಗತ್ಪ್ರಸಿದ್ಧಿಯಾಗಿದೆ. ಆದರೆ ಇಲ್ಲಿನ ನಿಂಬೆ ಬೆಳೆಗಾರರು ಸೂಕ್ತ ಮಾರುಕಟ್ಟೆ ಮತ್ತು ಸೌಲಭ್ಯಗಳಿಲ್ಲದೆ ನಲುಗುತ್ತಿದ್ದಾರೆ. ನಿಂಬೆ ಅಭಿವೃದ್ಧಿ ನಿಗಮದಿಂದ ಬೆಳೆಗಾರರಿಗೆ ತಕ್ಷಣವೇ ಆರ್ಥಿಕ ಸಹಾಯ ನೀಡಬೇಕು. ನಿಂಬೆ ಹಣ್ಣುಗಳನ್ನು ಸಂರಕ್ಷಿಸಿಡಲು ಆಧುನಿಕ ವೇರ್‌ಹೌಸ್ (ಉಗ್ರಾಣ) ನಿರ್ಮಾಣ ಮಾಡಬೇಕು ಮತ್ತು ನಿಂಬೆ ಬೆಳೆಯ ವ್ಯಾಪಾರ ಕಡ್ಡಾಯವಾಗಿ ಎಪಿಎಂಸಿ ಮುಖಾಂತರವೇ ನಡೆಯುವಂತಾಗಬೇಕು ಎಂದು ಒತ್ತಾಯಿಸಿದರು.

ಮುಖಂಡರಾದ ಕಾಸೂಗೌಡ ಬಿರಾದರ ಮತ್ತು ಅನಿಲ ಜಮಾದಾರ ಮಾತನಾಡಿ, ಕೃಷ್ಣಾ ನದಿ ಮುಖಾಂತರ ತಾಲೂಕಿನ ಕೆರೆಗಳನ್ನು ತುಂಬಿಸಲು ನೀರು ಹರಿಸುವ ಪ್ರಕ್ರಿಯೆ ಸದ್ಯ ಪ್ರಾರಂಭವಾಗಿದೆ. ಕೆರೆಗಳು ಸಂಪೂರ್ಣವಾಗಿ ತುಂಬಿದ ತಕ್ಷಣವೇ ನಿಲ್ಲಿಸದೇ, ಕಾಲುವೆಗಳ ಮುಖಾಂತರ ರೈತರ ಜಮೀನುಗಳಿಗೂ ನೀರು ಹರಿಸಲು ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರಿಗೆ ತಲುಪಬೇಕಾದ ವೃದ್ಧಾಪ್ಯ ವೇತನದ ಅನುದಾನವನ್ನು ಸರ್ಕಾರ ಸದ್ಯ ತಡೆಹಿಡಿದಿದೆ. ಇದರಿಂದಾಗಿ ತಾಲೂಕಿನ ನೂರಾರು ವೃದ್ಧರು ಜೀವನ ನಡೆಸಲು ಕಷ್ಟಪಡುತ್ತಿದ್ದಾರೆ. ತಡೆಹಿಡಿದಿರುವ ವೃದ್ಧಾಪ್ಯ ವೇತನದ ಅನುದಾನವನ್ನು ತಕ್ಷಣವೇ ಬಿಡುಗಡೆ ಮಾಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಈ ಎಲ್ಲ ಪ್ರಮುಖ ಬೇಡಿಕೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ನಿರ್ಲಕ್ಷ್ಯ ವಹಿಸಿದರೆ ಅಥವಾ ಅಭಿವೃದ್ಧಿ ಕಾರ್ಯಗಳಿಗೆ ವೇಗ ನೀಡದಿದ್ದರೆ ಮುಂದಿನ ದಿನಗಳಲ್ಲಿ ತಾಲೂಕಿನಾದ್ಯಂತ ಸರ್ಕಾರದ ವಿರುದ್ಧ ಉಗ್ರ ಹೋರಾಟ ರೂಪಿಸಲಾಗುವುದು ಎಂದು ಬಿಜೆಪಿ ಮುಖಂಡರು ಜಂಟಿಯಾಗಿ ಎಚ್ಚರಿಕೆ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಮಂಡಲ ಪ್ರಧಾನ ಕಾರ್ಯದರ್ಶಿ ದೇವೇಂದ್ರ ಕುಂಬಾರ, ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಶಿವು ಬಗಲಿ, ರೈತ ಮೋರ್ಚಾ ಅಧ್ಯಕ್ಷ ಚೆನ್ನಯ್ಯ ಹಿರೇಮಠ, ನಾಗೇಶ ಹೆಗಡ್ಯಾಳ, ವೀರನಗೌಡ ಪಾಟೀಲ, ಸಂತೋಷ ಪಾಟೀಲ, ಬಾಗಪ್ಪ ನಾವಿ ಸೇರಿದಂತೆ ಪಕ್ಷದ ಇನ್ನಿತರ ಪ್ರಮುಖರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಯುಕೆಪಿ ಎಂ.ಡಿ. ಕಚೇರಿಯ ಕಂಪ್ಯೂಟರ್ ಜಪ್ತಿ!

■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ಕಾಲುವೆ ಮತ್ತಿತರ ಉದ್ದೇಶಕ್ಕಾಗಿ ರೈತರಿಂದ ವಶಪಡಿಸಿಕೊಂಡ ಭೂಮಿಗೆ ನ್ಯಾಯಾಲಯ ನಿಗದಿಪಡಿಸಿದ ಹೆಚ್ಚುವರಿ ಪರಿಹಾರ ನೀಡದ ಕಾರಣ ಮಂಗಳವಾರ ಕೃಷ್ಣಾ ಭಾಗ್ಯ ಜಲ ನಿಗಮದ ಇಲ್ಲಿಯ ವ್ಯವಸ್ಥಾಪಕ ನಿರ್ದೇಶಕರ ಕಚೇರಿಯನ್ನು ಜಪ್ತಿ ಮಾಡಲಾಯಿತು.

ರೈತರಾದ ನಾನಾಗೌಡ ಪಾಟೀಲ ಅವರ 41,96,074 ರೂ, ದೇವೇಂದ್ರ ಬಸಣ್ಣ ತಳವಾರ ಅವರ 32,07,990 ರೂ, ಭೀಮನಗೌಡ ಬಸನಗೌಡ ಟಕ್ಕಳಕಿ ಅವರಿಗೆ ,65,39,367 ರೂ ಪರಿಹಾರವನ್ನು ಇಂಡಿ ನಗರದ ಯುಕೆಪಿಯ ವಿಶೇಷ ಭೂಸ್ವಾಧೀನಾಧಿಕಾರಿಗಳು ನೀಡಬೇಕಿತ್ತು. ಪರಿಹಾರ ನೀಡಲು ವಿಫಲರಾದ ಕಾರಣ ವಿಜಯಪುರದ ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ಆದೇಶದಂತೆ ಮಂಗಳವಾರ ಒಂದು ಕಂಪ್ಯೂಟರ್ ನ್ನು ಜಪ್ತಿ ಮಾಡಲಾಯಿತು.

ವಕೀಲರಾದ ಡಿ.ಜಿ. ಬಿರಾದಾರ, ಕೆ.ಎಚ್. ನಿಡೋಣಿ, ಕೆ.ಪಿ. ಬೂದಿಹಾಳ, ಐ.ಜಿ. ವಾದಿಶೆಟ್ಟಿ ರೈತರ ಪರ ವಾದ ಮಂಡಿಸಿದ್ದರು.



**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR